ಶುಕ್ರವಾರ, 19.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 117
Digital Varthe Kannada Daily
Volume 01 - Issue 117
Friday 19.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಹೆತ್ತ ತಂದೆ-ತಾಯಿಯನ್ನು ಕೊಂದು ದೇಹಗಳನ್ನು ಕತ್ತರಿಸಿ ನದಿಗೆಸೆದ ಪಾಪಿ ಪುತ್ರ



**ಜೌನ್‌ಪುರ:** ಮಗನೊಬ್ಬ ಹೆತ್ತ ತಂದೆ-ತಾಯಿಯನ್ನೇ ಕೊಲೆಮಾಡಿ ದೇಹಗಳನ್ನು ಕತ್ತರಿಸಿ ನದಿಗೆ ಎಸೆದಿರುವ ಭಯಾನಕ ಘಟನೆ ಉತ್ತರ ಪ್ರದೇಶದ ಜೌನ್ಪುರದಲ್ಲಿ ನಡೆದಿದೆ. ಕಾಣೆಯಾದ ದಂಪತಿಯ ಹುಡುಕಾಟವು ಪೊಲೀಸರನ್ನು ಅವಳಿ ಕೊಲೆವರೆಗೆ ಕೊಂಡೊಯ್ದಿತ್ತು. ತಂದೆಯ ಹಠಮಾರಿತನ ಹಾಗೂ ಮಗನ ಕೋಪ ಹೇಗೆ ಒಂದು ದುರಂತಕ್ಕೆ ಕಾರಣಯಿತು ಎಂಬುದರ ಬಗ್ಗೆ ಮಾಹಿತಿ ಇಲ್ಲಿದೆ. ಎಂಜಿನಿಯರ್ ಆಗಿರುವ ಅಂಬೇಶ್ ತನ್ನ ತಂದೆ ಶ್ಯಾಮ್ ಬಹದ್ದೂರ್(62), ತಾಯಿ ಬಬಿತಾ(60) ಅವರನ್ನು ಕೊಲೆ ಮಾಡಿ, ಗರಗಸದಿಂದ ದೇಹಗಳನ್ನು ಕತ್ತರಿಸಿ ನದಿಗೆ ಎಸೆದ ಆರೋಪದ ಮೇಲೆ ಬಂಧಿಸಿದ್ದಾರೆ. ಅಂಬೇಷ್ ಮತ್ತು ಆತನ ಹೆತ್ತವರ ನಡುವೆ ಮುಸ್ಲಿಂ ಪತ್ನಿಯ ವಿಷಯವಾಗಿ ಜಗಳ ನಡೆಯುತ್ತಿತ್ತು, ಅವರು ಆಕೆಯನ್ನು ಮನೆಯೊಳಗೆ ಸೇರಿಸಲು ನಿರಾಕರಿಸಿದ್ದರು.

ಅಂಬೇಷ್ ಮತ್ತು ಆತನ ಪತ್ನಿ ಅಂತಿಮವಾಗಿ ಬೇರೆಯಾಗಲು ನಿರ್ಧರಿಸಿದ್ದರು. ಮತ್ತು ಜೀವನಾಂಶ ಪಾವತಿಸಲು ಅವರಿಗೆ ಹಣದ ಅಗತ್ಯವಿತ್ತು. ಆತ ತನ್ನ ತಂದೆಯನ್ನು ಕೇಳಿದ್ದ, ಆದರೆ ಅವರು ನಿರಾಕರಿಸಿದ್ದಾಗಿ ಹೇಳಲಾಗಿದೆ. ಇದು ಅವರ ಕೊನೆಯ ಜಗಳಕ್ಕೆ ಕಾರಣವಾಯಿತು, ಅದು ಎರಡು ಸಾವುಗಳಲ್ಲಿ ಕೊನೆಗೊಂಡಿತು. ಡಿಸೆಂಬರ್ 13 ರಂದು, ಅಂಬೇಷ್ ಅವರ ಸಹೋದರಿ ವಂದನಾ, ಜೌನ್‌ಪುರದ ಜಫರಾಬಾದ್ ಪೊಲೀಸ್ ಠಾಣೆಯಲ್ಲಿ ಪೋಷಕರು ನಾಪತ್ತೆಯಾಗಿರುವ ಬಗ್ಗೆ ದೂರು ದಾಖಲಿಸಿದ್ದರು.

ಅವರ ಪೋಷಕರು ಮತ್ತು ಸಹೋದರ ಕಾಣೆಯಾಗಿದ್ದಾರೆ ಎಂದು ಅವರು ಹೇಳಿದ್ದರು.ನಿವೃತ್ತ ರೈಲ್ವೆ ಉದ್ಯೋಗಿ ಶ್ಯಾಮ್ ಬಹದ್ದೂರ್ ಮತ್ತು ಅವರ ಪತ್ನಿ ಬಬಿತಾ ಅವರಿಗೆ ಮೂವರು ಹೆಣ್ಣುಮಕ್ಕಳು ಮತ್ತು ಒಬ್ಬ ಮಗ . ಮಗ ಅಂಬೇಶ್ ಸುಮಾರು ಐದು ವರ್ಷಗಳ ಹಿಂದೆ ಮುಸ್ಲಿಂ ಮಹಿಳೆಯನ್ನು ವಿವಾಹವಾಗಿದ್ದ. ಅವರ ಪೋಷಕರು ಈ ವಿವಾಹವನ್ನು ಒಪ್ಪಲಿಲ್ಲ ಮತ್ತು ತಮ್ಮ ಮುಸ್ಲಿಂ ಸೊಸೆಯನ್ನು ತಮ್ಮ ಮನೆ ಒಳಗೆ ಬರಲು ಅವಕಾಶ ನೀಡುವುದಿಲ್ಲ ಎಂದು ಹೇಳಿದರು. ತಂದೆ ಶ್ಯಾಮ್ ಬಹದ್ದೂರ್ ಹೆಂಡತಿಯಿಂದ ದೂರಾಗುವಂತೆ ಕೇಳುತ್ತಲೇ ಇದ್ದರು ಎಂದು ಅಂಬೇಶ್ ಹೇಳಿದ್ದಾರೆ. ಕೊನೆಗೆ, ಆಕೆ ಒಪ್ಪಿಕೊಂಡು 5 ಲಕ್ಷ ರೂಪಾಯಿ ಜೀವನಾಂಶ ಕೇಳಿದ್ದಳು. ತನ್ನ ಹೆತ್ತವರ ಒತ್ತಾಯದ ಮೇರೆಗೆ ಅಂಬೇಶ್ ತನ್ನ ಮದುವೆಯನ್ನು ಕೊನೆಗೊಳಿಸಲು ಒಪ್ಪಿಕೊಂಡಿದ್ದ. ಜೀವನಾಂಶಕ್ಕಾಗಿ 5 ಲಕ್ಷ ರೂ. ಬೇಕಾಗಿತ್ತು.

ಎರಡು ತಿಂಗಳಿನಿಂದ ಜೌನ್‌ಪುರದಲ್ಲಿ ವಾಸಿಸುತ್ತಿದ್ದ ಆತ ಡಿಸೆಂಬರ್ 8 ರಂದು ತನ್ನ ತಂದೆಯ ಬಳಿ ಸಹಾಯ ಮಾಡುವಂತೆ ಕೇಳಿಕೊಂಡಿದ್ದ. ಶ್ಯಾಮ್ ಬಹದ್ದೂರ್ ನಿರಾಕರಿಸಿದ್ದರು ಮತ್ತು ಇದು ಅಂಬೇಶ್ ಮತ್ತು ಅವನ ಹೆತ್ತವರ ನಡುವೆ ಜಗಳಕ್ಕೆ ಕಾರಣವಾಯಿತು. ಒಂದು ಹಂತದಲ್ಲಿ, ಅಂಬೇಶ್ ತನ್ನ ತಾಯಿ ಬಬಿತಾಳಿಗೆ ರುಬ್ಬುವ ಕಲ್ಲಿನಿಂದ ಹೊಡೆದಿದ್ದ, ಇದನ್ನು ನೋಡಿ ಶ್ಯಾಮ್ ಕೂಗಿಕೊಂಡಾಗ ಅವರ ತಲೆಗೂ ಹೊಡೆದಿದ್ದಾನೆ. ಸ್ವಲ್ಪ ಸಮಯದ ನಂತರ ಇಬ್ಬರೂ ಸಾವನ್ನಪ್ಪಿದ್ದಾರೆ. ತನ್ನ ಹೆತ್ತವರನ್ನು ಕೊಂದ ನಂತರ, ಅಂಬೇಶ್ ಸಾಕ್ಷ್ಯಗಳನ್ನು ನಾಶಮಾಡಲು ಮುಂದಾಗಿದ್ದ. ಶವಗಳನ್ನು ವಿಲೇವಾರಿ ಮಾಡಲು ಅವನು ದೊಡ್ಡ ಚೀಲವನ್ನು ಹುಡುಕಲು ಪ್ರಾರಂಭಿಸಿದ್ದ, ಆದರೆ ಅದು ಸಿಗಲಿಲ್ಲ. ಗ್ಯಾರೇಜ್‌ನಲ್ಲಿ ಕೆಲವು ಸಣ್ಣ ಚೀಲಗಳು ಇದ್ದವು, ಇದಕ್ಕಾಗಿ ಆತ ಶವಗಳನ್ನು ತುಂಡುಗಳಾಗಿ ಕತ್ತರಿಸಿ ಚೀಲಕ್ಕೆ ತುಂಬಿ ಮುಂಜಾನೆ ನದಿಗೆ ಎಸೆದಿದ್ದ. ನಂತರ ಅವನು ತನ್ನ ಸಹೋದರಿ ವಂದನ್ ಗೆ ಕರೆ ಮಾಡಿ, ಅವರ ಹೆತ್ತವರು ಜಗಳವಾಡಿ ಮನೆಯಿಂದ ಹೊರಗೆ ಹೋಗಿದ್ದಾರೆ ಮತ್ತು ಅವರನ್ನು ಹುಡುಕಲು ಹೋಗುತ್ತಿರುವುದಾಗಿ ತಿಳಿಸಿ, ನಂತರ ತನ್ನ ಫೋನ್ ಅನ್ನು ಸ್ವಿಚ್ ಆಫ್ ಮಾಡಿಕೊಂಡಿದ್ದ.

ವಂದನಾಗೆ ಕರೆ ಮಾಡಿದ ಆರು ದಿನಗಳ ನಂತರ ಅಂಬೇಶ್ ಕಾಣೆಯಾಗಿದ್ದ. ಈ ಸಮಯದಲ್ಲಿ, ಅವನು ಎಲ್ಲೆಡೆ ಸುತ್ತಾಡುತ್ತಾ ತನ್ನ ಫೋನ್ ಅನ್ನು ಆಫ್ ಮಾಡಿಕೊಂಡಿದ್ದ. ಡಿಸೆಂಬರ್ 14 ರಂದು, ಅವನು ಇದ್ದಕ್ಕಿದ್ದಂತೆ ಜಾನ್‌ಪುರಕ್ಕೆ ಹಿಂತಿರುಗಿದ್ದ. ಬಳಿಕ ಪೊಲೀಸರ ತನಿಖೆ ವೇಳೆ ಆತ ತಪ್ಪೊಪ್ಪಿಕೊಂಡಿದ್ದಾನೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

## ಕಬಡ್ಡಿ ಪಟು ರಾಣಾ ಹತ್ಯೆ ಪ್ರಕರಣ: ಎನ್‌ಕೌಂಟರ್‌ನಲ್ಲಿ ಆರೋಪಿ ಹರ್ಪಿಂದರ್ ಸಾವು



**ಮೊಹಾಲಿ:** ದೇಶದ ಕ್ರೀಡಾ ಲೋಕ ಕವನ್ನು ಬೆಚ್ಚಿಬೀಳಿಸಿದ್ದ ಖ್ಯಾತ ಕಬಡ್ಡಿ ಪಟು ರಾಣಾ ಬಾಲಚೌರಿಯಾ ಹತ್ಯೆ ಪ್ರಕರಣ ಈಗ ಅಂತ್ಯ ಕಂಡಿದೆ. ಹತ್ಯೆ ನಡೆಸಿ ತಲೆಮರೆಸಿಕೊಂಡಿದ್ದ ಪ್ರಮುಖ ಆರೋಪಿ ಹರ್ಪಿಂದರ್ ಅಲಿಯಾಸ್ ಮಿದ್ದು ಎಂಬಾತನನ್ನು ಮೊಹಾಲಿ ಪೊಲೀಸರು ಎನ್ ಕೌಂಟರ್ ನಲ್ಲಿ ಹೊಡೆದುರುಳಿಸಿದ್ದಾರೆ.


ಮೊಹಾಲಿಯಲ್ಲಿ ಅದ್ದೂರಿ ಕಬಡ್ಡಿ ಟೂರ್ನಿ ಯೊಂದನ್ನು ಆಯೋಜಿಸಲಾಗಿತ್ತು. ರಾಣಾ ಬಾಲಚೌರಿಯಾ ಅವರು ಕೇವಲ ಆಯೋಜಕರಲ್ಲದೆ, ತಂಡದ ನಾಯಕನಾಗಿ ಸ್ವತಃ ಕಬಡ್ಡಿ ಅಖಾಡಕ್ಕಿಳಿದಿದ್ದರು. ಪಂದ್ಯದ ಟಾಸ್ ಪ್ರಕ್ರಿಯೆ ಯಶಸ್ವಿಯಾಗಿ ಮುಗಿದಿತ್ತು. ಎರಡೂ ತಂಡದ ಆಟಗಾರರು ವಾರ್ಮ್ ಅಪ್ ಮಾಡುತ್ತಿದ್ದರು. ಸಾವಿರಾರು ಕ್ರೀಡಾಭಿಮಾನಿಗಳು ಪಂದ್ಯ ವೀಕ್ಷಿಸಲು ಕುಳಿತಿದ್ದರು. ಇನ್ನೇನ ಪಂ ದ್ಯ ಆರಂ ಭವಾಗಬೇಕು ಎನ್ನುವಷ್ಟರಲ್ಲಿ ಏಕಾಏಕಿ ನುಗ್ಗಿದ ಹರ್ಪಿಂದರ್ ಹಾಗೂ ಆತನ ಸಹಚರರು ರಾಣಾ ಮೇಲೆ ಗುಂಡು ಹಾರಿಸಿ ದಾಳಿ ಮಾಡಿದ್ದಾರೆ. ಹಲವು ಬಾರಿ ಗುಂಡುಗಳು ತಗುಲಿದ ಪರಿಣಾಮ ರಾಣಾ ಕಬಡ್ಡಿ ಅಂಕಣದಲ್ಲೇ ಕುಸಿದು ಬಿದ್ದು ಸಾವನ್ನಪ್ಪಿದ್ದರು. ಈ ಘಟನೆಯಿಂದ ಕ್ರೀಡಾಂಗಣದಲ್ಲಿ ಕಾಲ್ತುಳಿತ ಉಂಟಾಗಿ ಅಭಿಮಾನಿಗಳು ಭಯಭೀತರಾಗಿ ಓಡಿದ್ದರು. ಹತ್ಯೆಯ ನಂತರ ಪಲಾಯನ ಮಾಡಿದ್ದ ಆರೋಪಿಗಳ ಪತ್ತೆಗಾಗಿ ಮೊಹಾಲಿ ಪೊಲೀಸರು ವಿಶೇಷ ತಂಡಗಳನ್ನು ರಚಿಸಿದ್ದರು.


ಸಿಸಿಟಿವಿ ದೃಶ್ಯಾವಳಿಗಳು ಮತ್ತು ಕಬಡ್ಡಿ ಪಂದ್ಯದ ನೇರ ಪ್ರಸಾರವಾಗುತ್ತಿದ್ದ ವಿಡಿಯೋಗಳ ಆಧಾರದ ಮೇಲೆ ಆರೋಪಿಗಳನ್ನು ಗುರುತಿಸಲಾಯಿತು. ತನಿಖೆಯ ವೇಳೆ ಪೊಲೀಸರಿಗೆ ಮೋಸ್ಟ್ ವಾಂಟೆಡ್ ಲಿಸ್ಟ್‌ನಲ್ಲಿದ್ದ ಹರ್ಪಿಂದರ್ ಅಲಿಯಾಸ್ ಮಿದ್ದು ಎಂಬಾತನೇ ಈ ಕೃತ್ಯ ಎಸಗಿರುವುದು ದೃಢಪಟ್ಟಿತ್ತು. ಇಂದು (ಡಿಸೆಂಬರ್ 17) ಮೊಹಾಲಿಯ ಹೊರವಲಯದ ತರ್ನ ತರಾನ್ ಪ್ರದೇಶದಲ್ಲಿ ಆರೋಪಿ ಹರ್ಪಿಂದರ್ ಅಡಗಿರುವ ಮಾಹಿತಿ ಪಡೆದ ಪೊಲೀಸರು ಅವನಿದ್ದ ಸ್ಥಳದ ಸುತ್ತುಸುತ್ತುವರಿದರು.

ಈ ವೇಳೆ ಶರಣಾಗುವಂತೆ ಸೂಚಿಸಿದರೂ ಕೇಳದ ಹರ್ಪಿಂದರ್, ಪೊಲೀಸರ ಮೇಲೆಯೇ ಗುಂಡಿನ ದಾಳಿ ನಡೆಸಿದ್ದಾನೆ. ಆತ್ಮರಕ್ಷಣೆಗಾಗಿ ಪೊಲೀ ಸರು ಗುಂಡುಹಾರಿಸಿದ್ದಾರೆ ಈ ದಾಳಿಯಲ್ಲಿ ಆರೋಪಿ ಹರ್ಪಿಂದರ್ ತೀವ್ರವಾಗಿ ಗಾಯಗೊಂಡಿದ್ದಾರೆ. ಕೂಡಲೇ ಆತನನ್ನು ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿ ಯಾಗದೆ ಮೃತಪಟ್ಟಿದ್ದಾನೆ ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಮೃತಪಟ್ಟ ಹರ್ಪಿಂದರ್ ಹಲವು ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಎನ್ನಲಾಗಿದೆ.

ಆದರೆ, ಒಬ್ಬ ಪ್ರಸಿದ್ಧ ಕಬಡ್ಡಿ ಆಟಗಾರ ಮತ್ತು ಆಯೋಜಕನಾಗಿದ್ದ ರಾಣಾ ಬಾಲಚೌರಿಯಾ ಅವರನ್ನು ಹತ್ಯೆ ಮಾಡಲು ನಿಖರ ಕಾರಣವೇನು ಎಂಬುದು ಇನ್ನೂ ನಿಗೂಢವಾಗಿದೆ. ಹಳೆಯ ವೈಷಮ್ಯ ಅಥವಾ ಬೆಟ್ಟಿಂಗ್ ದಂಧೆಯ ಕೈವಾಡವಿರಬಹುದೇ ಎಂಬ ನಿಟ್ಟಿನಲ್ಲಿ ಪೊಲೀಸರು ತನಿಖೆ ಯನ್ನು ಮುಂದುವರಿಸಿದ್ದಾರೆ. ರಾಣಾ ಅವರ ನಿಧನದಿಂದ ಪಂಜಾಬ್ ಕಬಡ್ಡಿ ಲೋಕಕ್ಕೆ ತುಂಬಲಾರದ ನಷ್ಟ ಉಂಟಾಗಿದ್ದು, ಕೇವಲ ಎರಡೇ ದಿನದಲ್ಲಿ ಹಂತಕನ ಹತ್ಯೆ ಮಾಡುವ ಮೂಲಕ ಪೊಲೀಸರು ಅಪರಾಧಿಗಳಿಗೆ ಕಠಿಣ ಸಂದೇಶ ರವಾನಿಸಿದ್ದಾರೆ.

## ಬಾಡಿಗೆ ವಿವಾದ ಭೀಕರ ಅಂತ್ಯ: ಮನೆ ಮಾಲೀಕರ ಹತ್ಯೆ, ಸೂಟ್‌ಕೇಸ್‌ನಲ್ಲಿ ಶವ





**ಗಾಜಿಯಾಬಾದ್,:** ಕಳೆದ ಐದಾರು ತಿಂಗಳು ಗಳಿಂದ ಬಾಡಿಗೆ ಪಾವತಿಸದ ಬಾಡಿಗೆ ದಾರರು ಕೊನೆಗೆ ಮನೆ ಮಾಲೀ ಕರನ್ನೇ ಕೊಲೆ ಮಾಡಿರುವ ಘಟನೆ ಗಾಜಿಯಾಬಾದ್‌ನ ರಾಜನಗರದಲ್ಲಿ ನಡೆದಿದೆ. ಔರಾ ಚಿಮೆರಾ ಸೊಸೈಟಿಯಲ್ಲಿ ಈ ಘಟನೆ ನಡೆದಿದೆ. ಕೊಲೆಯ ನಂತರ, ಆರೋಪಿ ದಂಪತಿ ಮಹಿಳೆಯ ದೇಹವನ್ನು ತುಂಡು ಮಾಡಿ ಹಾಸಿಗೆಯ ಕೆಳಗೆ ಸೂಟ್‌ಕೇಸ್‌ನಲ್ಲಿರಿಸಿದ್ದರು ಎಂದು ಆರೋಪಿಸಲಾಗಿದೆ. ಮಹಿಳೆ ಹಲವು ಗಂಟೆಗಳ ಕಾಲ ಕಾಣಿಸದ ಕಾರಣ ಅಕ್ಕಪಕ್ಕದ ಮನೆಯವರಿಗೆ ಅನುಮಾನ ಬಂದಿತ್ತು. ಫ್ಲಾಟ್‌ನ ಸಿ ಸಿ ಟಿ ವಿ ದೃ ಶ್ಯಾ ವ ಳಿ ಗ ಳ ನ್ನು ಪ ರಿ ಶೀ ಲಿ ಸಿ ದಾ ಗ , ಮಹಿಳೆ ಸಂಜೆ ಫ್ಲಾಟ್‌ಗೆ ಪ್ರವೇಶಿಸಿರುವುದು ಮಾತ್ರ ಕಂಡುಬಂದಿತ್ತು. ಆದರೆ ಆಕೆ ಒಮ್ಮೆಯೂ ಹೊರಗೆ ಹೋಗಿರಲಿಲ್ಲ. ಅನುಮಾನದ ಮೇರೆಗೆ ಸೊಸೈಟಿ ನಿವಾಸಿಗಳು ಬಾಡಿಗೆದಾರರ ಫ್ಲಾಟ್‌ಗೆ ಹೋಗಿ ಅಲ್ಲಿ ಪರಿಶೀಲಿಸಿದಾಗ ಮಹಿಳೆಯ ಶವ ಸೂಟ್‌ಕೇಸ್‌ನಲ್ಲಿ ತುಂಬಿರುವುದನ್ನು ಕಂಡುಕೊಂಡಿದ್ದಾರೆ.

ಆರೋಪಿಗಳು ತಪ್ಪಿಸಿಕೊಳ್ಳಲು ಪ್ರಯತ್ನಿಸಿದರು ಆದರೆ ವಿಫಲರಾದರು. ಘಟನೆಯ ಬಗ್ಗೆ ವಿವರಗಳನ್ನು ನಂದಗ್ರಾಮ ಎಸಿಪಿ ಉಪಾಸನಾ ಪಾಂಡೆ ಹಂಚಿಕೊಂಡಿದ್ದು, ಹಲವು ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಹೇಳಿದರು. ಸುಮಾರಿಗೆ, ಔರಾ ಚಿಮೇರಾ ಸೊಸೈಟಿಯಲ್ಲಿ ನಡೆದ ಕೊಲೆಯ ಬಗ್ಗೆ ಪಿಆರ್‌ವಿಗೆ ನಂದಗ್ರಾಮ್ ಪೊಲೀಸ್ ಠಾಣೆಯಲ್ಲಿ ಮಾಹಿತಿ ಸಿಕ್ಕಿತು. ವಿಚಾರಣೆ ಮತ್ತು ತನಿಖೆಯ ನಂತರ, ರಾಜನಗರದ ಔರಾ ಚಿಮೇರಾ ಸೊಸೈಟಿಯ ಎಂ -105 ನಿವಾಸಿ ಉಮೇಶ್ ಶರ್ಮಾ ಅವರ ಪತ್ನಿ ದೀಪ್ ಶಿಖಾ ಶರ್ಮಾ ಬಾಡಿಗೆ ಸಂಗ್ರಹಿಸಲು ಮತ್ತೊಂದು ಫ್ಲಾಟ್‌ಗೆ ಹೋಗಿದ್ದರು ಎಂಬುದು ತಿಳಿದುಬಂದಿತ್ತು. ತಡರಾತ್ರಿಯವರೆಗೆ ಅವರು ಹಿಂತಿರುಗದಿದ್ದಾಗ, ಅವರ ಕೆಲಸದಾಕೆ ಅನುಮಾನಗೊಂಡು ಫ್ಲಾಟ್‌ಗೆ ಹೋಗಿದ್ದಾರೆ. ತಪಾಸಣೆಯಲ್ಲಿ, ದೀಪ್ ಶಿಖಾ ಶರ್ಮಾ ಅವರ ಶವ ಸೂಟ್ ಕೇಸ್‌ನಲ್ಲಿ ಇರುವುದು ಕಂಡು ಬೆಚ್ಚಿಬಿದ್ದಿದ್ದಾರೆ. ಆರೋಪಿಗಳಾದ ಬಾಡಿಗೆದಾರರು ಅಜಯ್ ಗುಪ್ತಾ ಮತ್ತು ಆಕೃತಿ ಗುಪ್ತಾ ಅವರಿಬ್ಬರೂ ಪೊಲೀಸ್ ಕಸ್ಟಡಿಯಲ್ಲಿದ್ದಾರೆ. ಕುಟುಂಬ ಸದಸ್ಯರಿಂದ ಹೇಳಿಕೆಗಳನ್ನು ಸ್ವೀಕರಿಸಲಾಗಿದ್ದು, ಸಂಬಂಧಿತ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗುತ್ತಿದೆ. ಮುಂದಿನ ಕಾನೂನು ಕ್ರಮಗಳು ನಡೆಯುತ್ತಿವೆ ಎಂದು ಅವರು ಹೇಳಿದರು. ಈ ದಂಪತಿ ಕಳೆದ ಐದಾರು ತಿಂಗಳಿನಿಂದ ಬಾಡಿಗೆ ಹಣ ಕೊಟ್ಟಿರಲಿಲ್ಲ ಎನ್ನುವ ಮಾಹಿತಿ ಲಭ್ಯವಾಗಿದೆ.

## ಪ್ರೀತಿ ಹೆಸರಲ್ಲಿ ವಂಚಿಸಿ ಯುವತಿ ಮೇಲೆ ಗ್ಯಾಂಗ್ ರೇಪ್







**ರಾಮನಗರ:** ಪ್ರೀತಿ ಹೆಸರಿನಲ್ಲಿ ವಂಚಿಸಿ ಯುವತಿ ಮೇಲೆ ಗ್ಯಾಂಗ್ ರೇಪ್ ಎಸಗಿದ್ದ ಮೂವರು ಕಾಮುಕರನ್ನು ಪೊಲೀಸರು ಬಂಧಿಸಿರುವ ಘಟನೆ ಮಾಗಡಿ ಪಟ್ಟಣದಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ವಿಕಾಸ್, ಪ್ರಶಾಂತ್, ಚೇತನ್ ಬಂಧಿತ ಆರೋಪಿಗಳು. ಮನೆಯಲ್ಲಿ ಯಾರೂ ಇಲ್ಲದ ವೇಳೆ ಕಾಮುಕರು ಯುವತಿ ಮೇಲೆ ಅತ್ಯಾಚಾರ ಎಸಗಿದ್ದರು. ಅಕ್ಟೋಬರ್ ತಿಂಗಳಲ್ಲಿ ಘಟನೆ ನಡೆದಿತ್ತು. ಆದ್ರೆ ಈ ನೋವಿನಿಂದ ಮಾನಸಿಕ ಖಿನ್ನತೆಗೆ ಒಳಗಾಗಿದ್ದ ಸಂತ್ರಸ್ತೆ ತಡವಾಗಿ ದೂರು ನೀಡಿದ ಬಳಿಕ ಪ್ರಕರಣ ಬೆಳಕಿಗೆ ಬಂದಿದೆ. ಬೆಂಗಳೂರಿನ ಪ್ರತಿಷ್ಠಿತ ಕಾಲೇಜುವೊಂದರಲ್ಲಿ 2ನೇ ವರ್ಷದ ಪದವಿ ವ್ಯಾಸಂಗ ಮಾಡುತ್ತಿರುವ ಸಂತ್ರಸ್ತೆ ನಿನ್ನೆಯಷ್ಟೇ ಮಾಗಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾಳೆ. ದೂರು ಹಿನ್ನೆಲೆ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಮೂವರು ಕಾಮುಕರನ್ನ ಬಂಧಿಸಿದ್ದಾರೆ. ಪ್ರೀತಿ ಹೆಸರಿನಲ್ಲಿ ವಂಚನೆ ಬಂಧಿತ ಮೂವರಲ್ಲಿ ಆರೋಪಿ ವಿಕಾಸ್ ಯುವತಿಯ ಪ್ರಿಯಕರನೇ ಆಗಿದ್ದಾನೆ. ಬೆಂಗಳೂರಿನಲ್ಲಿ ಪದವಿ ವ್ಯಾಸಂಗ ಮಾಡುತ್ತಿದ್ದ ಯುವತಿಯನ್ನ ಪ್ರೀತಿಸುತ್ತಿದ್ದ. ಕೊನೆಗೆ ಪ್ರೀತಿ ಹೆಸರಿನಲ್ಲೇ ವಂಚಿಸಿ, ಸ್ನೇಹಿತರ ಜೊತೆಗೂಡಿ ಅತ್ಯಾಚಾರ ಎಸಗಿದ್ದಾನೆ ಅಂತ ಸಂತ್ರಸ್ತೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

## 10 ಅಪ್ರಾಪ್ತ ಬಾಲಕಿಯರಿಗೆ ನಿದ್ರೆ ಮಾತ್ರೆ ನೀಡಿ ಅತ್ಯಾ ಚಾರ: ಆರೋಪಿ ಅರೆಸ್ಟ್

**ಮುಂಬೈ:** ಮುಂಬೈನಲ್ಲಿ ಅಪ್ರಾಪ್ತ 10 ಬಾಲಕಿಯರಿಗೆ ತಂಪು ಪಾನೀಯದಲ್ಲಿ ನಿದ್ರೆ ಮಾತ್ರೆಗಳನ್ನು ಬೆರೆಸಿ ಬಾಲಕಿಯರಿಗೆ ನೀಡಿದ್ದಾರೆ, ಬಳಿಕ ಬಾಲಕಿಯರ ಮೇಲೆ ಅತ್ಯಾಚಾರ ವೆಸಗುತ್ತಿದ್ದ ಕಾಮುಕನೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಸುಮಾರು 10 ಬಾಲಕಿಯರು ಈತನ ಕೃತ್ಯಕ್ಕೆ ಬಲಿಯಾಗಿರುವುದು ಇಡೀ ನಗರವನ್ನೇ ಬೆಚ್ಚಿಬೀಳಿಸಿದೆ. ಬಂಧಿತ ಆರೋಪಿಯನ್ನು ಮಹೇಶ್ ರಮೇಶ್ ಪವಾರ್ (45) ಎಂದು ಗುರುತಿಸಲಾಗಿದೆ. ಈತ ಅಪ್ರಾಪ್ತ ಬಾಲಕಿಯರನ್ನು ಗುರಿಯಾಗಿಸಿಕೊಂಡು ದೌರ್ಜನ್ಯ ಎಸಗುತ್ತಿದ್ದ. ಬಾಲಕಿಯರಿಗೆ ತಂಪು ಪಾನೀಯ ನೀಡುವ ನೆಪದಲ್ಲಿ ಆಮಿಷವೊಡ್ಡಿ, ಅದರಲ್ಲಿ ಮಾದಕ ದ್ರವ್ಯ ಅಥವಾ ನಿದ್ರಾಜನಕ ಮಾತ್ರೆಗಳನ್ನು ಬೆರೆಸುತ್ತಿದ್ದ. ಬಾಲಕಿಯರು ಪ್ರಜ್ಞೆ ತಪ್ಪಿದ ನಂತರ ಅವರ ಮೇಲೆ ಲೈಂಗಿಕ ದೌರ್ಜನ್ಯ ಎಸಗುತ್ತಿದ್ದ ಅಷ್ಟೇ ಅಲ್ಲದೆ, ಈ ಭೀಕರ ಕೃತ್ಯವನ್ನು ತನ್ನ ಮೊಬೈಲ್‌ನಲ್ಲಿ ಸೆರೆಹಿಡಿದಿದ್ದಾನೆ ಎಂದು ಪೊಲೀಸರು ತಿಳೀಸಿದ್ದಾರೆ. ಅತ್ಯಾಚಾರದ ನಂತರ ಈ ಅಶ್ಲೀಲ ವಿಡಿಯೋಗಳನ್ನು ತೋರಿಸಿ ಸಂತ್ರಸ್ತ ಬಾಲಕಿಯರನ್ನು ಆರೋಪಿ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದ. ವಿಡಿಯೋಗಳನ್ನು ಇಂಟರ್ನೆಟ್‌ನಲ್ಲಿ ವೈರಲ್ ಮಾಡುವುದಾಗಿ ಬೆದರಿಕೆ ಹಾಕಿ ಹಲವು ಬಾರಿ ಶೋಷಣೆ ಮಾಡಿದ್ದಾನೆ. ಇತ್ತೀಚೆಗೆ ಈತ ಅತ್ಯಾಚಾರದ ವಿಡಿಯೋವೊಂದನ್ನು ವಾಟ್ಸಾಪ್ ಗ್ರೂಪ್ ನಲ್ಲಿ ಹಂಚಿಕೊಂಡಿದ್ದರಿಂದ ಈ ಪ್ರಕರಣ ಬೆಳಕಿಗೆ ಬಂದಿದೆ. ಡಿಸೆಂಬರ್ 13 ರಂದು ಕುರಾರ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಪ್ರಕರಣದ ಗಾಂಭೀರತೆ ಅರಿತ ಪೊಲೀಸ್ ಇನ್ಸ್‌ಪೆಕ್ಟರ್ ಸಂಜಯ್ ತಾವ್ಡೆ ನೇತೃತ್ವದ ತಂಡವು ತಕ್ಷಣ ಕಾರ್ಯಪ್ರವೃತ್ತರಾಗಿ, ಕೇವಲ 6 ಗಂಟೆಗಳ ಒಳಗಾಗಿ ವಿರಾರ್‌ನಲ್ಲಿ ಆರೋಪಿಯನ್ನು ಹೆಡೆಮುರಿ ಕಟ್ಟಿದ್ದಾರೆ. ತನಿಖೆಯ ವೇಳೆ ಈತ ವಕೋಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿಯೂ ಇದೇ ರೀತಿಯ ಅಪರಾಧಗಳನ್ನು ಮಾಡಿರುವುದು ಪತ್ತೆಯಾಗಿದೆ. ಸದ್ಯ ಆರೋಪಿಯನ್ನು ಹೆಚ್ಚಿನ ತನಿಖೆಗಾಗಿ ವಕೋಲಾ ಪೊಲೀಸರಿಗೆ ಹಸ್ತಾಂತರಿಸಲಾಗಿದೆ.


ಯುವಕನ ನಿರ್ಲಕ್ಷ್ಯದಿಂದ 64 ವರ್ಷದ ವಕೀಲ ಬಲಿ

ಬೆಂಗಳೂರು ನಗರದ ಆರ್‌ಎಂವಿ ಎಕ್ಸ್‌ಟೆನ್ಷನ್ ಪ್ರದೇಶದಲ್ಲಿ ಯುವಕನ ಕಾರು ಅಡ್ಡಾದಿಡ್ಡಿ ಚಾಲನೆ ಮಾಡಿದ ಪರಿಣಾಮ 64 ವರ್ಷದ ವೃದ್ಧ ವಕೀಲರು ಸಾವನ್ನಪ್ಪಿದ ಘಟನೆ ನಡೆದಿದೆ. ರಾತ್ರಿ ಸುಮಾರು 9.30 ಗಂಟೆಗೆ ಘಟನೆ ನಡೆದಿದ್ದು, ಸಂಜಯನಗರ ಸಂಚಾರ ಪೊಲೀಸರು ಕಾರು ಚಾಲಕನ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಘಟನೆ ಆರ್‌ಎಂವಿ ಎಕ್ಸ್‌ಟೆನ್ಷನ್ನ ಎಂ.ಎಸ್.ರಾಮಯ್ಯ ರಸ್ತೆಯಲ್ಲಿ ನಡೆದಿದ್ದು, 19 ವರ್ಷದ ಶಿಶಿರ್ ಸುಧೀರ್ ಪಾಟೀಲ್ ಎಂಬ ಯುವಕ ಸಿಯಾಟ್ ಕಾರು ಚಾಲನೆ ಮಡುತ್ತಿದ್ದ ವೇಳೆ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ 64 ವರ್ಷದ ವಕೀಲ ಚಂದ್ರಶೇಖರ ರೆಡ್ಡಿಯವರ ಮೇಲೆ ಕಾರು ಗುದ್ದಿದ್ದಾನೆ. ಕಾರು ಗುದ್ದಿದ ರಭಸದಿಂದ ವೃದ್ಧರು ಸುಮಾರು 15 ಅಡಿ ದೂರ ಹಾರಿ ಬಿದ್ದು ಸಾವನ್ನಪ್ಪಿದ್ದಾರೆ. ಕಾರು ನಂತರ ರಸ್ತೆಯ ಅಂಚಿನಲ್ಲಿ ನಿಲ್ಲಿಸಿದ್ದ ಇನ್ನೊಂದು ಎರ್ಟಿಗಾ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಈ ಘಟನೆಯಲ್ಲಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಯುವಕ ಮತ್ತು ಯುವತಿಗೆ ಗಂಭೀರ ಗಾಯವಾಗಿದೆ. ಗಾಯಗೊಂಡವರನ್ನ ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದಾರೆ. ಅಪಘಾತ ಮಾಡಿದ ಯುವಕ ಶಿಶಿರ್ ಸುಧೀರ್ ಪಾಟೀಲ್ ಬಿ.ಇ. ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಯೆಂದು ತಿಳಿದುಬಂದಿದೆ. ಯುವಕ ತನ್ನ ತಂದೆಯ ಕಾರನ್ನು ಚಲಾಯಿಸುತ್ತಿದ್ದ, ಆರೋಪಿಯನ್ನ ಬಂಧಿಸಿ ವಿಚಾರಣೆ ನಡೆಸುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಮೃತರಾದ ಚಂದ್ರಶೇಖರ ರೆಡ್ಡಿ ಅವರು 64 ವರ್ಷ ವಯಸ್ಸಿನ ವಕೀಲರಾಗಿದ್ದರು. ಅವರು ಬೆಂಗಳೂರಿನ ಪ್ರತಿಷ್ಠಿತ ವಕೀಲರಾಗಿ ದೀರ್ಘಕಾಲ ಸೇವೆ ಸಲ್ಲಿಸಿದ್ದರು. ಉಚ್ಚ ನ್ಯಾಯಾಲಯ ಬಾರ್ ಅಸೋಸಿಯೇಷನ್ ಸೇರಿದಂತೆ ಅನೇಕ ಸಂಘ-ಸಂಸ್ಥೆಗಳಲ್ಲಿ ಸಕ್ರಿಯರಾಗಿದ್ದರು. ನ್ಯಾಯ ಮತ್ತು ಸಾಮಾಜಿಕ ಕಾರ್ಯಗಳಲ್ಲಿ ಆಸಕ್ತಿ ಹೊಂದಿದ್ದ ಇವರು ಸುಮಾರು ನಾಲ್ಕು ದಶಕಗಳ ಕಾಲ ವೃತ್ತಿ ನಡೆಸಿದ್ದಾರೆ.

## ಜನಸಂದಣಿ ಮಧ್ಯೆ ಕಿರುಕುಳ: ಮಾಲ್‌ನಲ್ಲಿ ನಟಿಗೆ ಅವಮಾನ



ನಟಿಯರು ಸಾರ್ವಜನಿಕವಾಗಿ ಕಾಣಿಸಿಕೊಂಡಾಗ ಎಲ್ಲರೂ ಸೆಲ್ಫಿಗೆ ಮುಗಿ ಬೀಳುತ್ತಾರೆ. ಆದರೆ, ಕೆಲವೊಮ್ಮೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾಗ ಅಲ್ಲಿ ಬೇರೆಯದೇ ರೀತಿಯ ಪರಿಸ್ಥಿತಿ ನಿರ್ಮಾಣ ಆಗುತ್ತದೆ. ಸಿಕ್ಕಿದ್ದೇ ಚಾನ್ಸ್ ಎಂದು ಕಂಡ ಕಂಡಲ್ಲಿ ಮುಟ್ಟುವ ಕಿಡಿಗೇಡಿಗಳೂ ಇದ್ದಾರೆ. ಈಗ ತೆಲುಗು ನಟಿ ನಿಧಿ ಅಗರ್ ವಾಲ್ ಅವರಿಗೂ ಇದೇ ರೀತಿಯ ಅನುಭವ ಆಗಿದೆ. ಈ ವಿಡಿಯೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು ಚರ್ಚೆ ಹುಟ್ಟುಹಾಕಿದೆ. ನಿಧಿ ಅವರು ಹುಟ್ಟಿದ್ದು ಆಂಧ್ರದಲ್ಲಿ. ಅವರು ತಮ್ಮ ಶಿಕ್ಷಣವನ್ನು ಬೆಂಗಳೂರಿನಲ್ಲಿ ಮಾಡಿದ್ದಾರೆ.

ಹೀಗಾಗಿ, ಅವರಿಗೆ ಕರ್ನಾಟಕದ ಲಿಂಕ್ ಇದೆ. 2017ರಲ್ಲಿ ಅವರು ಚಿತ್ರರಂಗಕ್ಕೆ ಕಾಲಿಟ್ಟರು. 'ಇಸ್ಮಾರ್ಟ್ ಶಂಕರ್' ಚಿತ್ರದ ಮೂಲಕ ಅವರು ಜನಪ್ರಿಯತೆ ಪಡೆದರು. ಈಗ ಪ್ರಭಾಸ್ ನಟನೆಯ 'ರಾಜಾಸಾಬ್' ಸಿನಿಮಾಗೆ ನಾಯಕಿ ಆಗಿದ್ದಾರೆ. ಈ ಚಿತ್ರದ ಈವೆಂಟ್‌ನಲ್ಲಿ ಅವರು ತೊಂದರೆ ಅನುಭವಿಸಿದ್ದಾರೆ. 'ರಾಜಾಸಾಬ್' ಚಿತ್ರದ ಪ್ರಮೋಷನ್ ಈವೆಂಟ್ ಹೈದರಾಬಾದ್‌ನ ಲೂಲು ಮಾಲ್‌ನಲ್ಲಿ ನಡೆದಿದೆ. ಈ ವೇಳೆ ಸಿನಿಮಾದ ನಿರ್ದೇಶಕ ಮಾರುತಿ ಹಾಗೂ ನಟಿ ನಿಧಿ ಭಾಗಿ ಆಗಿದ್ದರು. ಊಹಿಸಿದ್ದಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರಿದ್ದರು.

ಅವರು ಈವೆಂಟ್ ಮುಗಿಸಿ ಬರುವಾಗ ಎಲ್ಲರೂ ಅವರನ್ನು ಮುತ್ತಿಕೊಂಡಿದ್ದಾರೆ. ಅವರ ದೇಹವನ್ನು ಟಚ್ ಮಾಡಲು ಕೆಲವರು ಪ್ರಯತ್ನಿಸಿದ್ದಾರೆ. ಇದರಿಂದ ಅವರಿಗೆ ಮುಜುಗರ ಆಗಿದೆ. ನಿಧಿಗೆ ಇದು ಕಿರುಕುಳದಂತೆ ಕಾಣಿಸಿದೆ. ಬೌನ್ಸರ್‌ಗಳು ಶ್ರಮ ಹಾಕಿದರೂ ಜನರು ಮುತ್ತಿಕೊಳ್ಳೋದನ್ನು ತಡೆಯಲು ಸಾಧ್ಯವಾಗಲೇ ಇಲ್ಲ. ಕೊನೆಗೂ ಅವರು ಕಾರನ್ನು ಏರಿದ್ದಾರೆ. ಈ ವೇಳೆ ಅವರ ಡ್ರೆಸ್ ಪರಿಸ್ಥಿತಿ ಕೂಡ ಹದಗೆಟ್ಟಿತ್ತು. ಕಾರಿನಲ್ಲಿ ಬಂದು ಕುಳಿತ ಬಳಿಕ ಅವರು ನಿಟ್ಟುಸಿರು ಬಿಟ್ಟಿದ್ದಾರೆ. ಈ ಸಂದರ್ಭದ ವಿಡಿಯೋನ ವೈರಲ್ ಮಾಡಲಾಗುತ್ತಿದೆ. ನಟಿಯ ಜೊತೆ ಅಲ್ಲಿ ನೆರೆದಿದ್ದವರು ನಡೆದುಕೊಂಡಿದ್ದು ಸರಿ ಅಲ್ಲ ಎಂದಿದ್ದಾರೆ. ಇನ್ನೂ ಕೆಲವರು ನಿಜವಾದ ಅಭಿಮಾನಿಗಳು ಈ ರೀತಿ ಮಾಡೋದಿಲ್ಲ ಎನ್ನುತ್ತಿದ್ದಾರೆ.

## ತೇಗದ ಮರ ಕಡಿದು ಅಕ್ರಮ ಸಾಗಾಟ – ಓರ್ವ ಅರೆಸ್ಟ್, ಐವರು ಎಸ್ಕೇಪ್

**ಮಡಿಕೇರಿ:** ಸೋಮವಾರಪೇಟೆ ಮೀಸಲು ಅರಣ್ಯದಲ್ಲಿ ತೇಗ ಸೇರಿದಂತೆ ಬೆಲೆಬಾಳುವ ಮರಗಳನ್ನ ಅಕ್ರಮವಾಗಿ ಸಾಗಿಸುತ್ತಿದ್ದ ಓರ್ವನನ್ನ ವಲಯ ಅರಣ್ಯಾಧಿಕಾರಿಗಳು ಬಂಧಿಸುವ ಘಟನೆ ನಡೆದಿದೆ. ಅಲ್ಲದೇ ತಲೆ ಮರೆಸಿಕೊಂಡಿರುವ ಉಳಿದ ಐವರು ಆರೋಪಿಗಳ ಪತ್ತೆಗಾಗಿ ಬಲೆ ಬೀಸಿದ್ದಾರೆ. ಆರೋಪಿಗಳು ಸೋಮವಾರಪೇಟೆ ವಲಯದ ಹುದುಗೂರು ಶಾಖಾ ವ್ಯಾಪ್ತಿಯ ಐಗೂರು ಗ್ರಾಮದ ಕಾಜೂರು ಅರಣ್ಯ ಪ್ರದೇಶದಲ್ಲಿ ತೇಗದ ಮರಗಳನ್ನ ಕಡಿದಿದ್ದರು. ಬಳಿಕ ಅವುಗಳನ್ನ ನಾಟಗಳನ್ನಾಗಿ ಪರಿವರ್ತಿಸಿ ಸಾಗಿಸಲು ಬೊಲೆರೋ ಪಿಕಪ್ ವಾಹನಕ್ಕೆ ತುಂಬಿಸುತ್ತಿದ್ದರು.

ಇದೇ ವೇಳೆ ಅರಣ್ಯ ಅಧಿಕಾರಿಗಳು ದಾಳಿ ನಡೆಸಿದರು. ಈ ಸಂದರ್ಭ ಆರೋಪಿಗಳು ಅರಣ್ಯಾಧಿಕಾರಿಗಳ ಮೇಲೆಯೇ ಪ್ರತಿದಾಳಿಗೆ ಯತ್ನಿಸಿದ್ದರು. ನಂತರ ಆತ್ಮರಕ್ಷಣೆಗಾಗಿ ಗುಂಡು ಹಾರಿಸಿದ್ರು. ಬಳಿಕ ಎಡವಾರೆ ಗ್ರಾಮದ ಓರ್ವ ಆರೋಪಿಯನ್ನ ಸ್ಥಳದಲ್ಲೇ ಬಂಧಿಸಿ ತೇಗದ ನಾಟಗಳನ್ನ ವಶಪಡಿಸಿಕೊಂಡಿದ್ದಾರೆ.

### ಕಿರುಕುಳ ಕೇಸ್‌ಗೆ ತಿರುವು: ಇನ್ಸ್‌ಪೆಕ್ಟರ್‌ಗೆ ಪತ್ರ, 'ಚಿನ್ನಿ' ವಿರುದ್ಧ ಹಲವು ಪ್ರಕರಣಗಳು



**ಬೆಂಗಳೂರು:** ಇಲ್ಲಿನ ರಾಮಮೂರ್ತಿ ನಗರ ನಿವಾಸಿಯಾಗಿರೋ ಸಂಜನಾ ಅಲಿಯಾಸ್ ವನಜಾ ರಾಮಮೂರ್ತಿ ನಗರ ಪೊಲೀಸ್ ಇನ್ಸ್‌ಪೆಕ್ಟರ್‌ಗೆ ಲವ್ ಮಾಡುವಂತೆ ಲವ್ ಲೇಟರ್ ಬರೆದು ಪ್ರೀತಿಸುವಂತೆ ಇನ್ನಿಲ್ಲದಂತೆ ಕಾಡಿದ್ಲು. ಇನ್ಸ್‌ಪೆಕ್ಟರ್ ಇವಳ ಪ್ರೀತಿ ಒಪ್ಪಿಕೊಳ್ಳದೇ ಇದ್ದಾಗ, ಆತ್ಮಹತ್ಯೆ ಬೆದರಿಕೆ ಹಾಕಿದ್ಲು. ಇದರಿಂದ ಕರ್ತವ್ಯಕ್ಕೆ ಅಡ್ಡಿ, ಆತ್ಮಹತ್ಯೆ ಬೆದರಿಕೆ ಆರೋಪದ ಅಡಿ ಕೇಸ್ ದಾಖಲಿಸಿ ಸಂಜನಾಳನ್ನು ಜೈಲಿಗೆ ಕಳುಹಿಸಲಾಗಿದೆ. ಚೆಕ್ ಮಾಡಿದ ಪೊಲೀಸ ರಿಗೆ ಹಲವು ವಿಚಾರಗಳು ಗೊತ್ತಾಗಿವೆ. ಇದೇ ಸಂಜನಾ 2 ವರ್ಷ ಗಳ ಹಿಂದೆ ಕಂಟ್ರ್ಯಾಕ್ಟರ್ ಸತೀಶ್ ರೆಡ್ಡಿ ಅನ್ನೋ ರನ್ನ ಪರಿಚಯ ಮಾಡ್ಕೊಂಡು, ಅವರನ್ನ ಮನೆಗೆ ಊಟಕ್ಕೆ ಕರೆದ ಸಂಜನಾ ಅವರ ಜೊತೆ ದೈಹಿಕ ಸಂಪರ್ಕ ಬೆಳಸಿ ಅದರ ಫೋಟೋಗಳನ್ನ ಇಟ್ಕೊಂಡು ಬ್ಲ್ಯಾಕ್ ಮಾಡಿದ್ರಂತೆ. ಸತೀಶ್ ರೆಡ್ಡಿ ಬಳಿಯಿದ್ದ ಚಿನ್ನದ ಉಂಗುರ, ಸರ, ಮೂರು ಲಕ್ಷ ನಗದು ಕಸಿದುಕೊಂಡಿದ್ದಾಳೆ ಅಂತಾ ಇದೇ ರಾಮ ಮೂರ್ತಿ ನಗರ ಪೊಲೀಸ್ ಠಾಣೆ ಯಲ್ಲಿ ಎಫ್‌ಐಆರ್ ದಾಖಲಾಗಿದೆ. ಪೊಲೀಸರು, ಸುಳ್ಳು ಆರೋಪ ಅಂತಾ ಕೇಸ್ ಬಿ ರಿಪೋರ್ಟ್ ಸಲ್ಲಿಕೆ ಮಾಡಿದ್ದಾರೆ. ಅಷ್ಟೇ ಅಲ್ಲದೇ ತನಿಖೆ ವೇಳೆ ಇದೇ ರೀತಿ ಹಲವರಿಗೆ ಹನಿಟ್ರ್ಯಾಪ್ ಮಾಡಿರೋದು, ಅಧಿಕಾರಿಗಳ ಪರಿಚಯ ಮಾಡ್ಕೊಂಡು ಹೆಸರಿನಲ್ಲಿ ಹಲ ವರಿಗೆ ಮೋಸ ಮಾಡಿರೋದು ಪೊಲೀಸರ ತನಿಖೆಯಲ್ಲಿ ಗೊತ್ತಾಗಿದೆ.

## ಗೀತಾಂಜಲಿ ಸಾವು ಪ್ರಕರಣ: ವರದಕ್ಷಿಣೆ ಕೇಸಲ್ಲಿ ಮಾಜಿ ನ್ಯಾಯಾಧೀಶರ ಕುಟುಂಬ ಮುಕ್ತ



**ನವದೆಹಲಿ:** ಹರಿಯಾಣದ ನ್ಯಾಯಾಂಗ ಅಧಿಕಾರಿಯ ಪತ್ನಿ ಹಾಗೂ ಮಾಜಿ ನ್ಯಾಯಾಧೀಶರ ಸೊಸೆ 28 ವರ್ಷದ ಗೀತಾಂಜಲಿ ಗುರುಗ್ರಾಮ್‌ನಲ್ಲಿ ಗುಂಡೇಟಿನಿಂದ ಸಾವನ್ನಪ್ಪಿದ್ದರು. ಅದಾದ 12 ವರ್ಷಗಳ ನಂತರ, ಪಂಚಕುಲದ ವಿಶೇಷ ಸಿಬಿಐ ನ್ಯಾಯಾಲಯವು ಆಕೆಯ ಪತಿ, ಮಾವ, ಅತ್ತೆಯನ್ನು ವರದಕ್ಷಿಣೆ ಸಾವು, ಕ್ರಿಮಿನಲ್ ಪಿತೂರಿ ಮತ್ತು ಕ್ರೌರ್ಯ ಆರೋಪಗಳಿಂದ ಖುಲಾಸೆಗೊಳಿಸಿದೆ.

ಪಂಚಕುಲದ ವಿಶೇಷ ಸಿಬಿಐ ನ್ಯಾಯಾಲಯವು ಗುರುಗ್ರಾಮ್‌ನ ಮಾಜಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ರವನೀತ್ ಗಾರ್ಗ್ ಮತ್ತು ಅವರ ಪೋಷಕರಾದ ನಿವೃತ್ತ ಸೆಷನ್ಸ್ ನ್ಯಾಯಾಧೀಶರಾದ ಕೆ.ಕೆ ಗಾರ್ಗ್ ಮತ್ತು ರಚನಾ ಗಾರ್ಗ್ ಅವರನ್ನು 2013ರ ಗೀತಾಂಜಲಿ ಗಾರ್ಗ್ ಅವರ ವರದಕ್ಷಿಣೆ ಸಾವಿನ ಪ್ರಕರಣದಲ್ಲಿ ಖುಲಾಸೆಗೊಳಿಸಿದೆ. 12 ವರ್ಷಗಳ ಕಾಲ ನಡೆದ ಕಾನೂನು ಹೋರಾಟ ಇದೀಗ ಅಂತ್ಯವಾಗಿದೆ.

ಆದರೂ ಗೀತಾಂಜಲಿಯ ಸಾವಿಗೆ ನ್ಯಾಯ ದೊರೆತಿಲ್ಲ. ಸಾಕ್ಷ್ಯಗಳ ಕೊರತೆಯಿಂದ ಈ ಪ್ರಕರಣ ಖುಲಾಸೆಯಾಗಿದೆ. ಜುಲೈ 17, 2013ರಂದು ಗುರುಗ್ರಾಮ್‌ನ ಪೊಲೀಸ್ ಲೈನ್ಸ್ ಪೆರೇಡ್ ಮೈದಾನದಲ್ಲಿ ರವನೀತ್ ಅವರ ಪತ್ನಿ ಗೀತಾಂಜಲಿ ಗಾರ್ಗ್ (28) ಅವರ ಶವ ಪತ್ತೆಯಾಗಿತ್ತು. ಅವರಿಗೆ 4 ಗುಂಡುಗಳು ತಗುಲಿದ್ದವು.

ಆ ಶವದ ಬಳಿ ರವನೀತ್ ಗರ್ಗ್ ಅವರ ಲೈಸೆನ್ಸ್ ಪಡೆದ ರಿವಾಲ್ವರ್ ಪತ್ತೆಯಾಗಿತ್ತು. ನ್ಯಾಯಾಂಗದಲ್ಲಿ ರವನೀತ್ ಅವರ ಸ್ಥಾನ ಮತ್ತು ಶವ ಪತ್ತೆಯಾದ ಸಂದರ್ಭಗಳಿಂದಾಗಿ ಈ ಸಾವು ವ್ಯಾಪಕ ಗಮನ ಸೆಳೆದಿತ್ತು. ಸ್ಥಳೀಯ ಪೊಲೀಸರು ಮೊದಲು ಈ ಘಟನೆಯನ್ನು ಆತ್ಮಹತ್ಯೆ ಅನುಮಾನ ವ್ಯಕ್ತಪಡಿಸಿ ತನಿಖೆ ನಡೆಸಿದರು. ಆದರೆ ಹರಿಯಾಣ ಸರ್ಕಾರ ಸ್ವತಂತ್ರ ತನಿಖೆಗೆ ಶಿಫಾರಸು ಮಾಡಿದ ನಂತರ ಈ ತನಿಖೆಯನ್ನು ಆಗಸ್ಟ್ 2013ರಲ್ಲಿ ಸಿಬಿಐಗೆ ವರ್ಗಾಯಿಸಲಾಯಿತು. 2016ರಲ್ಲಿ ಸಲ್ಲಿಸಲಾದ ತನ್ನ ಚಾರ್ಜ್‌ಶೀಟ್‌ನಲ್ಲಿ ಸಿಬಿಐ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 302ರ ಅಡಿಯಲ್ಲಿ ಕೊಲೆ ಆರೋಪವನ್ನು ಕೈಬಿಟ್ಟಿತು. ಅದರ ಬದಲಿಗೆ ವರದಕ್ಷಿಣೆ ಸಾವು, ಕ್ರಿಮಿನಲ್ ಪಿತೂರಿ ಮತ್ತು ಕ್ರೌರ್ಯಕ್ಕೆ ಸಂಬಂಧಿಸಿದ ನಿಬಂಧನೆಗಳ ಅಡಿಯಲ್ಲಿ ಕೇಸ್ ಮುಂದುವರೆಸಿತು.

ಗೀತಾಂಜಲಿ ಅವರ ಸಹೋದರ, ಪ್ರಮುಖ ದೂರುದಾರ ಮತ್ತು ಪ್ರಮುಖ ಪ್ರಾಸಿಕ್ಯೂಷನ್ ಸಾಕ್ಷಿ ಪ್ರದೀಪ್ ಅಗರ್ವಾಲ್ ವಿಚಾರಣೆಯ ಸಮಯದಲ್ಲಿ ಪ್ರತಿಕೂಲವಾಗಿ ತಿರುಗಿದಾಗ ಪ್ರಾಸಿಕ್ಯೂಷನ್ ಪ್ರಕರಣವು ದೊಡ್ಡ ಹಿನ್ನಡೆಯನ್ನು ಅನುಭವಿಸಿತು. ಜುಲೈ 2018ರಲ್ಲಿ ನೀಡಿದ ತಮ್ಮ ಸಾಕ್ಷ್ಯದಲ್ಲಿ ಅಗರ್ವಾಲ್ ತಮ್ಮ ಹಿಂದಿನ ಆರೋಪಗಳನ್ನು ಹಿಂತೆಗೆದುಕೊಂಡರು. ಮದುವೆಯಲ್ಲಿ ಭಿನ್ನಾಭಿಪ್ರಾಯ ಅಥವಾ ಕ್ರೌರ್ಯದ ಯಾವುದೇ ಪುರಾವೆಗಳಿಲ್ಲ ಎಂದು ಪ್ರತಿವಾದಿಗಳು ವಾದಿಸಿದರು.

ಈ ಪ್ರಕರಣವು 9 ವರ್ಷಗಳ ಕಾಲ ವಿಚಾರಣೆಗೆ ಒಳಗಾಯಿತು, ಆದರೆ ಗೀತಾಂಜಲಿಯನ್ನು ಅವರ ನ್ಯಾಯಾಧೀಶ ಪತಿ ರವನೀತ್ ಗರ್ಗ್, ಮಾವ ಮತ್ತು ಅತ್ತೆ ಕೊಲೆ ಮಾಡಿದ್ದಾರೆ ಎಂದು ಸಾಬೀತುಪಡಿಸಲು ಸಿಬಿಐಗೆ ಸಾಧ್ಯವಾಗಲಿಲ್ಲ. ಹೀಗಾಗಿ ಸಿಬಿಐ ನ್ಯಾಯಾಲಯವು ಮೂವರನ್ನೂ ಖುಲಾಸೆಗೊಳಿಸಿತು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ರಾಜ್ಯ ಕಾಂಗ್ರೆಸ್ ಸರ್ಕಾರ ಅಂದ್ರೆ ಹೈಕಮಾಂಡ್ ಎಟಿಎಂ: ಕಾಂಗ್ರೆಸ್ ವಿರುದ್ಧ ಬಿ.ವೈ.ವಿಜಯೇಂದ್ರ ಕಿಡಿ




**ಬೆಳಗಾವಿ**: ಕರ್ನಾಟಕ ರಾಜ್ಯದಲ್ಲಿ ಸದ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ಆರೋಪಗಳು ಕೇಳಿಬರುತ್ತಿವೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಇತ್ತೀಚೆಗೆ ಬೆಳಗಾವಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡುತ್ತಾ, ಸರ್ಕಾರವು ರಾಜ್ಯದ ಖಜಾನೆಯನ್ನು ಲೂಟಿ ಮಾಡಿ ಕಾಂಗ್ರೆಸ್ ಹೈಕಮಾಂಡ್‌ಗೆ ಹಣ ಸಂದಾಯ ಮಾಡುತ್ತಿದೆ ಎಂದು ಕಾಂಗ್ರೆಸ್ ನಾಯಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಗದಗದಲ್ಲಿ ಆಯುಷ್ ಇಲಾಖೆಯ ಔಷಧಿ ಖರೀದಿಯಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ನಡೆದಿದೆ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಈ ಭ್ರಷ್ಟಾಚಾರದ ಹಿಂದೆ ಕಾಂಗ್ರೆಸ್ ಹೈಕಮಾಂಡ್ ಇದೆ ಎಂದು ಕಿಡಿಕಾರಿದ್ದಾರೆ. ಈ ಬಗ್ಗೆ ಮಾತನಾಡಿದ ರಾಜ್ಯ ವಿಪಕ್ಷ ನಾಯಕ ವಿಜಯೇಂದ್ರ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಅವರ ಹೈಕಮಾಂಡ್ ಎಟಿಎಂ ಆಗಿ ಪರಿವರ್ತನೆ ಆಗುತ್ತದೆ ಎಂದು ಹಿಂದೆಯೇ ಎಚ್ಚರಿಸಿದ್ದರು

ಇದೀಗ ಈ ಮಾತು ನಿಜವಾಗುತ್ತಿದೆ ಎಂದು ವಿಜಯೇಂದ್ರ ಕಿಡಿಕಾರಿದ್ದಾರೆ. ವಿಶೇಷವಾಗಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ರೂಪಾಯಿಗಳ ಹಣ ಪೋಲಾಗಿದ್ದು, ಇದು ಹೈಕಮಾಂಡ್‌ಗೆ ಸಂದಾಯವಾಗಿದೆ ಎಂದು ಆರೋಪ ಮಾಡಿದ್ದಾರೆ. ಸರ್ಕಾರದಿಂದ ಗುತ್ತಿಗೆ ಪಡೆಯಲು ಕಮಿಷನ್ ನೀಡಬೇಕಾಗಿದೆ ಎಂದು ಗುತ್ತಿಗೆದಾರರು ಪತ್ರ ಬರೆದಿದ್ದಾರೆ. ಇದರಿಂದಾಗಿ ರಾಜ್ಯದ ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿವೆ ಎಂದು ವಿಜಯೇಂದ್ರ ಆರೋಪಿಸಿದ್ದಾರೆ. ಭ್ರಷ್ಟಾಚಾರ ಬಿಟ್ಟರೆ ರಾಜ್ಯದಲ್ಲಿ ಏನೂ ಅಭಿವೃದ್ಧಿ ಆಗುತ್ತಿಲ್ಲ ಎಂದು ಹೇಳಿದ ಅವರು, ದುಡ್ಡು ಹೊಡೆಯುವವರಿಗೆ ಬಡವರು ಅಥವಾ ಶ್ರೀಮಂತರು ಎಂಬ ಭೇದಭಾವವಿಲ್ಲ, ರಾಜ್ಯದ ಖಜಾನೆಯನ್ನು ಖಾಲಿ ಮಾಡಿ ಹೈಕಮಾಂಡ್ ತೃಪ್ತಿಪಡಿಸುವ ಕೆಲಸ ನಡೆಯುತ್ತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ ಈ ಆರೋಪಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜಕೀಯದಲ್ಲಿ ತೀವ್ರ ಚರ್ಚೆಗಳು ನಡೆಯುತ್ತಿವೆ. ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ರಾಜ್ಯದಲ್ಲಿ ಹಲವು ಅಭಿವೃದ್ಧಿ ಯೋಜನೆಗಳು ಜಾರಿಯಲ್ಲಿವೆ. ಆದರೆ ವಿರೋಧ ಪಕ್ಷಗಳು ಇವುಗಳನ್ನು ಭ್ರಷ್ಟಾಚಾರದ ಮೂಲಕ ನಡೆಸಲಾಗುತ್ತಿದೆ ಎಂದು ಆರೋಪಿಸುತ್ತಿವೆ.

ವಾಲ್ಮೀಕಿ ನಿಗಮದ ಹಗರಣದಲ್ಲಿ ಈಗಾಗಲೇ ಹಲವು ಅಧಿಕಾರಿಗಳು ಮತ್ತು ರಾಜಕಾರಣಿಗಳು ತನಿಖೆಗೆ ಒಳಗಾಗಿದ್ದಾರೆ. ಆಯುಷ್ ಇಲಾಖೆಯ ಔಷಧಿ ಖರೀದಿಯಲ್ಲೂ ಅಸಹಜತೆಗಳು ಕಂಡುಬಂದಿವೆ ಎಂದು ಹೇಳಲಾಗುತ್ತಿದೆ. ರಾಜ್ಯದ ಆರ್ಥಿಕ ಸ್ಥಿತಿಯನ್ನು ಪರಿಗಣಿಸಿದರೆ, ಈ ಆರೋಪಗಳು ಗಂಭೀರವಾಗಿವೆ. ಕರ್ನಾಟಕದ ಖಜಾನೆಯಲ್ಲಿ ಕಳೆದ ವರ್ಷಗಳಲ್ಲಿ ಹಲವು ಯೋಜನೆಗಳಿಗೆ ಬಜೆಟ್ ಹಂಚಿಕೆ ಮಾಡಲಾಗಿದೆ. ಆದರೆ ಭ್ರಷ್ಟಾಚಾರದಿಂದಾಗಿ ಹಣದ ದುರ್ಬಳಕೆಯಾಗುತ್ತಿದೆ ಎಂಬ ಆರೋಪಗಳು ಜನರಲ್ಲಿ ಆತಂಕ ಮೂಡಿಸಿದೆ. ಬಿಜೆಪಿ ನಾಯಕರು ಈ ವಿಚಾರವನ್ನು ಬಳಸಿಕೊಂಡು ಸರ್ಕಾರದ ವಿರುದ್ಧ ಪ್ರತಿಭಟನೆಗಳನ್ನು ಆಯೋಜಿಸುತ್ತಿದ್ದಾರೆ. ಒಟ್ಟಾರೆಯಾಗಿ, ಕರ್ನಾಟಕ ರಾಜಕೀಯದಲ್ಲಿ ಭ್ರಷ್ಟಾಚಾರದ ಆರೋಪಗಳು ಹೊಸತಲ್ಲ. ಆದರೆ ಹೈಕಮಾಂಡ್‌ಗೆ ಹಣ ಸಂದಾಯದ ಆರೋಪಗಳು ಪಕ್ಷದ ಆಂತರಿಕ ವ್ಯವಹಾರಗಳನ್ನು ಪ್ರಶ್ನಿಸುತ್ತಿವೆ. ಜನರು ತಮ್ಮ ತೆರಿಗೆ ಹಣದ ಸರಿಯಾದ ಬಳಕೆಯನ್ನು ಬಯಸುತ್ತಾರೆ. ಸರ್ಕಾರ ಈ ಆರೋಪಗಳಿಗೆ ಸರಿಯಾದ ಉತ್ತರ ನೀಡಬೇಕಿದೆ. ಮುಂದಿನ ದಿನಗಳಲ್ಲಿ ಈ ವಿಚಾರ ಹೇಗೆ ಬೆಳೆಯುತ್ತದೆ ಎಂಬುದು ಕುತೂಹಲಕಾರಿ.

## ಭಾರತದ 'ಮ್ಯಾನುಫ್ಯಾಕ್ಚರಿಂಗ್' ಬಗ್ಗೆ ರಾಹುಲ್ ಗಾಂಧಿ ಟೀಕೆ



**ಬರ್ಲಿನ್**: ಕಾಂಗ್ರೆಸ್ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಜರ್ಮನಿ ಪ್ರವಾಸದಲ್ಲಿದೆ. ಜರ್ಮನಿಯ ಮ್ಯೂನಿಚ್‌ನಲ್ಲಿರುವ ವಿಶ್ವಪ್ರಸಿದ್ಧ 'ಬಿಎಂಡಬ್ಲ್ಯೂ' ಕಾರು ಉತ್ಪಾದನಾ ಘಟಕಕ್ಕೆ ಭೇಟಿ ನೀಡಿದ ನಂತರ ರಾಹುಲ್ ಗಾಂಧಿ, ಭಾರತದ ಉತ್ಪಾದನಾ ಸಾಮರ್ಥ್ಯದ ಬಗ್ಗೆ ಮಾತನಾಡಿರುವುದು ತೀವ್ರ ವಿವಾದಕ್ಕೆ ಕಾರಣವಾಗಿದೆ. ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಬಿಎಂಡಬ್ಲ್ಯೂ ಘಟಕದ ಭೇಟಿಯ ವೀಡಿಯೊ ಹಂಚಿಕೊಂಡಿರುವ ರಾಹುಲ್ ಗಾಂಧಿ, ಭಾರತದ ಆರ್ಥಿಕತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಯಾವುದೇ ಬಲವಾದ ಆರ್ಥಿಕತೆಗೆ ಉತ್ಪಾದನಾ ವಲಯವು ಬೆನ್ನೆಲುಬಾಗಿದೆ.

ಆದರೆ ದುರಾದೃಷ್ಟವಶಾತ್ ಭಾರತದಲ್ಲಿ ಉತ್ಪಾದನಾ ಸಾಮರ್ಥ್ಯವು ಕುಸಿಯುತ್ತಿದೆ. ಉದ್ಯೋಗ ಸೃಷ್ಟಿಗೆ ಪೂರಕವಾದ ವಾತಾವರಣ ಭಾರತದಲ್ಲಿ ಇಲ್ಲದಿರುವುದು ಯುವಜನರ ಭವಿಷ್ಯಕ್ಕೆ ಅಡ್ಡಿಯಾಗಿದೆ ಎಂದು ರಾಹುಲ್ ಗಾಂಧಿ ಟೀಕಿಸಿದ್ದಾರೆ. ರಾಹುಲ್ ಗಾಂಧಿ ಅವರ ಈ ಹೇಳಿಕೆಯನ್ನು ದೇಶ ವಿರೋಧಿ ರಾಗ ಎಂದು ಕರೆದಿರುವ ಬಿಜೆಪಿ ನಾಯಕರು, ಭಾರತದ ಬೆಳವಣಿಗೆಯ ಅಂಕಿಅಂಶಗಳನ್ನು ಮುಂದಿಟ್ಟು ತಿರುಗೇಟು ನೀಡಿದ್ದಾರೆ. ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ ಅವರು ಈ ಬಗ್ಗೆ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿ, ರಾಹುಲ್ ಗಾಂಧಿ ಅವರಿಗೆ ವಾಸ್ತವ ಜ್ಞಾನದ ಕೊರತೆಯಿದೆ ಎಂದು ಪ್ರತ್ಯುತ್ತರ ನೀಡಿದ್ದಾರೆ. ಎಲೆಕ್ಟ್ರಾನಿಕ್ಸ್ ಕ್ರಾಂತಿ: ಕಳೆದ 10 ವರ್ಷಗಳಲ್ಲಿ ಭಾರತದಲ್ಲಿ ಎಲೆಕ್ಟ್ರಾನಿಕ್ಸ್ ಉತ್ಪಾದನೆಯಲ್ಲಿ ಶೇ. 495ರಷ್ಟು ಅಭೂತಪೂರ್ವ ಬೆಳವಣಿಗೆ ಕಂಡಿದೆ ಮತ್ತು ರಫ್ತು ವಲಯದಲ್ಲಿ ಶೇ. 760ರಷ್ಟು ಪ್ರಗತಿಯಾಗಿದೆ.

ಆಟೋಮೊಬೈಲ್ ಹಬ್: 1991 ರಿಂದೀಚೆಗೆ ದೇಶೀಯ ವಾಹನಗಳ ಉತ್ಪಾದನೆಯು 14 ಪಟ್ಟು ಹೆಚ್ಚಾಗಿದೆ. ಭಾರತವು ಸದ್ಯದಲ್ಲೇ ಜಾಗತಿಕ ವಾಹನ ಉತ್ಪಾದನೆಯಲ್ಲಿ ಅಗ್ರಸ್ಥಾನಕ್ಕೇರಲಿದೆ.

ಭವಿಷ್ಯದ ಗುರಿ: 2030ರ ವೇಳೆಗೆ 5 ಕೋಟಿ ವಾಹನಗಳನ್ನು ಉತ್ಪಾದಿಸುವ ಗುರಿ ಹೊಂದಲಾಗಿದೆ. 2047ರ ವೇಳೆಗೆ ಭಾರತವು ವಿಶ್ವದ ಎರಡನೇ ಅತಿದೊಡ್ಡ ಆಟೋಮೊಬೈಲ್ ಉತ್ಪಾದನಾ ರಾಷ್ಟ್ರವಾಗಲಿದೆ.

ವಿದೇಶಿ ನೆಲದಲ್ಲಿ ನಿಂತು ಭಾರತದ ಆರ್ಥಿಕತೆಯನ್ನು ಟೀಕಿಸುವುದು ರಾಹುಲ್ ಗಾಂಧಿ ಅವರ ಹಳೆಯ ಚಾಳಿ ಎಂದು ಬಿಜೆಪಿ ಟೀಕಿಸಿದೆ. ಆದರೆ, ದೇಶದಲ್ಲಿ ಹೆಚ್ಚುತ್ತಿರುವ ನಿರುದ್ಯೋಗ ಸಮಸ್ಯೆಗೆ ಉತ್ಪಾದನಾ ವಲಯದ ಮಂದಗತಿಯೇ ಕಾರಣ ಎನ್ನುವುದು ಕಾಂಗ್ರೆಸ್ ವಾದವಾಗಿದೆ. ಬಿಜೆಪಿಯ ಈ ಪ್ರತಿಕ್ರಿಯೆಗೆ ರಾಹುಲ್ ಗಾಂಧಿ ಯಾವ ರೀತಿ ಪ್ರತಿಕ್ರಿಯಿಸುತ್ತಾರೆ ಎಂದು ಕಾದು ನೋಡಬೇಕಿದೆ.

# ಸೀಗಲ್ ಹಕ್ಕಿಯಲ್ಲಿ ಚೀನಾ ಜಿಪಿಎಸ್ ಟ್ರ್ಯಾಕರ್ ಪತ್ತೆ



**ಕಾರವಾರ**: ಇಲ್ಲಿನ ಸಮುದ್ರ ತೀರದಲ್ಲಿ ಪತ್ತೆಯಾದ ಸೀಗಲ್ ಹಕ್ಕಿಯ ದೇಹದಲ್ಲಿ ಚೀನಾ ಮೂಲದ ಜಿಪಿಎಸ್ ಟ್ರ್ಯಾಕರ್ ಪತ್ತೆಯಾಗಿರುವ ಅಚ್ಚರಿಯ ಹಾಗೂ ಆತಂಕಕಾರಿ ಘಟನೆಯೊಂದು ನಡೆದಿದೆ. ಈ ಟ್ರ್ಯಾಕರ್ ಕಂಡ ತಕ್ಷಣ ಸಾರ್ವಜನಿಕರು ನೀಡಿದ ಮಾಹಿತಿ ಮೇರೆಗೆ ಉತ್ತರ ಕನ್ನಡ ಜಿಲ್ಲಾ ಪೊಲೀಸರು ಮತ್ತು ಅರಣ್ಯ ಅಧಿಕಾರಿಗಳು ಹಕ್ಕಿಯನ್ನು ವಶಕ್ಕೆ ಪಡೆದು, ಅದರ ದೇಹದಲ್ಲಿದ್ದ ಸಾಧನವನ್ನು ಸುರಕ್ಷಿತವಾಗಿ ಹೊರತೆಗೆದಿದ್ದಾರೆ.

ಈ ಜಿಪಿಎಸ್ ಟ್ರ್ಯಾಕರ್ ಚೀನಾದ ಬೀಜಿಂಗ್‌ನಲ್ಲಿರುವ 'ಇಕೋ-ಎನ್ವಿರಾನ್ಮೆಂಟ್ ಸೈನ್ಸ್ ಅಕಾಡೆಮಿ' ಎಂಬ ಸಂಸ್ಥೆಗೆ ಸೇರಿದ್ದಾಗಿದೆ. ಬೀಜಿಂಗ್‌ನ ಹೈಡಿಯನ್ ಜಿಲ್ಲೆಯಲ್ಲಿ ಈ ಸಂಸ್ಥೆಯ ಕೇಂದ್ರ ಕಚೇರಿಯಿದ್ದು, ಲೈ ಕಾಮ್ ಎಂಬುವವರು ಇ ದರ ಮುಖ್ಯಸ್ಥರಾಗಿದ್ದಾರೆ.




ಈ ಸಂಸ್ಥೆಯು 1975 ರಿಂದಲೂ ಪರಿಸರ ಮತ್ತು ಜೀವವೈವಿಧ್ಯದ ಮೇಲೆ ಅಧ್ಯಯನ ನಡೆಸುತ್ತಿದೆ ಎಂದು ತಿಳಿದು ಬಂದಿದೆ. ಅಧ್ಯಯನವೋ ಅಥವಾ ಬೇಹುಗಾರಿಕೆಯೋ ? ಸೀಗಲ್ ಹಕ್ಕಿಗಳು ಸಾವಿರಾರು ಕಿಲೋಮೀಟರ್ ದೂರ ವಲಸೆ ಹೋಗುವ ಸ್ವಭಾವವನ್ನು ಹೊಂದಿವೆ. ಈ ಹಕ್ಕಿಗಳ ಹಾರಾಟದ ಮಾರ್ಗ, ಅವುಗಳ ವಲಸೆ ಪಥ ಹಾಗೂ ಅವುಗಳ ಜೀವನ ಚಕ್ರದ ಬಗ್ಗೆ ಅಧ್ಯಯನ ನಡೆಸಲು ಇಂತಹ ಜಿಪಿಎಸ್ ಸಾಧನಗಳನ್ನು ಅಳವಡಿಸುವುದು ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಮಾನ್ಯ. ಚೀನಾದ ಈ ಸಂಸ್ಥೆಯು ವಿಶ್ವದ 190ಕ್ಕೂ ಹೆಚ್ಚು ದೇಶಗಳಲ್ಲಿ ಇಂತಹ ಸಂಶೋಧನೆ ನಡೆಸುತ್ತಿರುವುದಾಗಿ ಮಾಹಿತಿ ನೀಡಿದೆ. ಆದರೆ, ಭಾರತದ ಗಡಿ ಭಾಗಗಳು ಮತ್ತು ಕರಾವಳಿ ತೀರಗಳಲ್ಲಿ ಚೀನಾದ ಇಂತಹ ಉಪಕರಣಗಳು ಪತ್ತೆಯಾದಾಗ ಅದನ್ನು ಕೇವಲ ಸಂಶೋಧನೆ ಎಂದು ಪರಿಗಣಿಸಲು ಸಾಧ್ಯವಿಲ್ಲ. ದೇಶದ ಭದ್ರತೆಯ ದೃಷ್ಟಿಯಿಂದ ಈ ಹಕ್ಕಿಯ ಮೂಲಕ ಬೇರಾವುದೇ ಮಾಹಿತಿ ಸಂಗ್ರಹಿಸಲಾಗುತ್ತಿದೆಯೇ ಎಂಬ ಅನುಮಾನ ಪೊಲೀಸರಲ್ಲಿ ಮೂಡಿದೆ.

ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಉತ್ತರ ಕನ್ನಡ ಜಿಲ್ಲಾ ಪೊಲೀಸ್ ಇಲಾಖೆಯು, ಸದರಿ ಟ್ರ್ಯಾಕರ್‌ನ ಉದ್ದೇಶ ಮತ್ತು ಅದರ ತಾಂತ್ರಿಕ ಸಾಮರ್ಥ್ಯದ ಬಗ್ಗೆ ಮಾಹಿತಿ ಕೋರಿ ಚೀನಾದ ಇಕೋ-ಎನ್ವಿರಾನ್ಮೆಂಟ್ ಸೈನ್ಸ್ ಅಕಾಡೆಮಿಗೆ ಇಮೇಲ್ ಕಳುಹಿಸಿದೆ.

ಈ ಸಾಧನವು ಕೇವಲ ಹಕ್ಕಿಯ ಹಾರಾಟವನ್ನು ಮಾತ್ರ ಟ್ರ್ಯಾಕ್ ಮಾಡುತ್ತದೆಯೇ ಅಥವಾ ಫೋಟೋ ಅಥವಾ ಧ್ವನಿ ಸಂಗ್ರಹಿಸುವ ಸಾಮರ್ಥ್ಯ ಹೊಂದಿದೆಯೇ ಎಂಬ ಬಗ್ಗೆಯೂ ತಾಂತ್ರಿಕ ತಪಾಸಣೆ ನಡೆಯುತ್ತಿದೆ. ಸದ್ಯ ಪೊಲೀಸರು ಸೀಗಲ್ ಹಕ್ಕಿಯ ದೇಹದಲ್ಲಿದ್ದ ಟ್ರ್ಯಾಕರ್ ಅನ್ನು ನಿಷ್ಕ್ರಿಯಗೊಳಿಸಲು ನಿರ್ಧರಿಸಿದ್ದಾರೆ.

ಭದ್ರತಾ ದೃಷ್ಟಿಯಿಂದ ಯಾವುದೇ ಅಪಾಯವಿಲ್ಲ ಎಂದು ಖಚಿತವಾದ ನಂತರವಷ್ಟೇ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು. ಅರಣ್ಯ ಇಲಾಖೆಯು ಕೂಡ ಜಾಗತಿಕ ಮಟ್ಟದಲ್ಲಿ ಸೀಗಲ್ ಹಕ್ಕಿಗಳ ಮೇಲೆ ನಡೆಯುತ್ತಿರುವ ಅಧ್ಯಯನಗಳ ಬಗ್ಗೆ ವರದಿ ಸಂಗ್ರಹಿಸುತ್ತಿದೆ.

## ದಿಡೀರನೆ ಆಸ್ಪತ್ರೆಗೆ ದಾಖಲಾದ ಯಶಸ್ವಿ ಜೈಸ್ವಾಲ್: ಕ್ರಿಕೆಟ್ ಆಡದಂತೆ ವೈದ್ಯರ ಸಲಹೆ



**ಮುಂಬೈ**: ಟೀಂ ಇಂಡಿಯಾದ ಯುವ ಸ್ಟಾರ್ ಓಪನರ್ ಯಶಸ್ವಿ ಜೈಸ್ವಾಲ್ ಇದ್ದಕ್ಕಿದ್ದಂತೆ ಆಸ್ಪತ್ರೆಗೆ ದಾಖಲಾಗಿ ಕ್ರಿಕೆಟ್ ಅಭಿಮಾನಿಗಳನ್ನು ಆತಂಕಕ್ಕೀಡುಮಾಡಿದ್ದಾರೆ.

ಪ್ರಸ್ತುತ ಸೈಯದ್ ಮುಷ್ತಾಕ್ ಅಲಿ ಟ್ರೋಫಿ ಟಿ20 ಟೂರ್ನಿಯಲ್ಲಿ ಮುಂಬೈ ಪರ ಆಡುತ್ತಿರುವ ಜೈಸ್ವಾಲ್, ಪಂದ್ಯದ ನಂತರ ತೀವ್ರ ಹೊಟ್ಟೆ ನೋವಿನಿಂದ ಬಳಲಿದ್ದರು. ಈ ಕಾರಣದಿಂದ ಅವರನ್ನು ತಕ್ಷಣ ಪುಣೆಯ ಪಿಂಪ್ರಿ ಚಿಂಚ್‌ವಾಡ್‌ನ ಆದಿತ್ಯ ಬಿರ್ಲಾ ಮೆಮೋರಿಯಲ್ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಪಂದ್ಯದ ಸಮಯದಲ್ಲಿ ಜೈಸ್ವಾಲ್ ಅವರಿಗೆ ಹೊಟ್ಟೆ ನೋವು ಆರಂಭವಾಗಿತ್ತು. ಪಂದ್ಯ ಮುಗಿದ ನಂತರ ನೋವು ಇನ್ನಷ್ಟು ತೀವ್ರಗೊಂಡಿದ್ದರಿಂದ ತಕ್ಷಣ ಆಸ್ಪತ್ರೆಗೆ ದಾಖಲಿಸಲಾಯಿತು. ಆಸ್ಪತ್ರೆಯಲ್ಲಿ ಸಿಟಿ ಸ್ಕ್ಯಾನ್ ಮತ್ತು ಅಲ್ಟ್ರಾಸೌಂಡ್ ಸ್ಕ್ಯಾನ್ ನಡೆಸಲಾಗಿದ್ದು, ವೈದ್ಯರು ಅವರಿಗೆ ಇಂಟ್ರಾವೆನಸ್ (IV) ಔಷಧಗಳನ್ನು ನೀಡಿದ್ದಾರೆ. ಸದ್ಯ ಅವರ ಆರೋಗ್ಯ ಸ್ಥಿರವಾಗಿದ್ದು, ಶೀಘ್ರದಲ್ಲೇ ಚೇತರಿಸಿಕೊಳ್ಳುವ ನಿರೀಕ್ಷೆಯಿದೆ. ಆದರೆ ವೈದ್ಯರು ಜೈಸ್ವಾಲ್ ಅವರಿಗೆ ಸದ್ಯಕ್ಕೆ ಕ್ರಿಕೆಟ್ ಆಡದೆ ವಿಶ್ರಾಂತಿ ತೆಗೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.

ಯಶಸ್ವಿ ಜೈಸ್ವಾಲ್ ಪ್ರಸ್ತುತ ಭಾರತ ತಂಡದಿಂದ ಹೊರಗಿದ್ದಾರೆ. ದಕ್ಷಿಣ ಆಫ್ರಿಕಾ ವಿರುದ್ಧದ ಟಿ20 ಸರಣಿಗೆ ಅವರು ಆಯ್ಕೆಯಾಗಿಲ್ಲ. ಭಾರತದ ಮುಂದಿನ ಅಂತಾರಾಷ್ಟ್ರೀಯ ಸರಣಿ ಜನವರಿ 2026ರಲ್ಲಿ ನ್ಯೂಜಿಲೆಂಡ್ ವಿರುದ್ಧದ್ದು - ಮೂರು ಏಕದಿನ ಮತ್ತು ಐದು ಟಿ20 ಪಂದ್ಯಗಳು. ಆದರೆ ಜೈಸ್ವಾಲ್ ಅವರು ಟೆಸ್ಟ್ ತಂಡದ ಮುಖ್ಯ ಸದಸ್ಯರಾಗಿದ್ದು, ಮುಂದಿನ ಟೆಸ್ಟ್ ಸರಣಿ ಆಗಸ್ಟ್‌ನಲ್ಲಿ ಶ್ರೀಲಂಕಾ ವಿರುದ್ಧ ನಡೆಯಲಿದೆ. ಅದಕ್ಕೂ ಮುನ್ನ ಐಪಿಎಲ್ 2026 ಆರಂಭವಾಗಲಿದ್ದು, ಜೈಸ್ವಾಲ್ ರಾಜಸ್ಥಾನ್ ರಾಯಲ್ಸ್ ಪರ ಆಡುವ ಸಾಧ್ಯತೆಯಿದೆ. ಚೇತರಿಕೆಗೆ ಸಾಕಷ್ಟು ಸಮಯ ಸಿಗುವುದರಿಂದ ಅವರ ಆಟಕ್ಕೆ ತೊಂದರೆಯಾಗುವ ಸಾಧ್ಯತೆ ಕಡಿಮೆ ಇದೆ.

ಕಳೆದ ಕೆಲವು ತಿಂಗಳುಗಳಿಂದ ಅದ್ಭುತ ಫಾರ್ಮ್‌ನಲ್ಲಿರುವ ಜೈಸ್ವಾಲ್, ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಲ್ಲಿ ಮೂರು ಪಂದ್ಯಗಳಲ್ಲಿ 145 ರನ್ ಗಳಿಸಿದ್ದಾರೆ (ಸರಾಸರಿ 48.33, ಸ್ಟ್ರೈಕ್ ರೇಟ್ 168.6). ಇದಕ್ಕೂ ಮುನ್ನ ದಕ್ಷಿಣ ಆಫ್ರಿಕಾ ವಿರುದ್ಧದ ಏಕದಿನ ಸರಣಿಯಲ್ಲಿ ಮೊದಲ ಏಕದಿನ ಶತಕ ಸಹಿತ 156 ರನ್ ಗಳಿಸಿದ್ದರು. ಟೆಸ್ಟ್ ಕ್ರಿಕೆಟ್‌ನಲ್ಲಿ ಡಬಲ್ ಸೆಂಚುರಿ ಬಾರಿಸಿದ ಮೊದಲ ಯುವ ಭಾರತೀಯ ಆಟಗಾರ ಎಂಬ ಹೆಗ್ಗಳಿಕೆಗೂ ಯಶಸ್ವಿ ಜೈಸಲ್ವಾಲ್ ಪಾತ್ರರಾಗಿದ್ದಾರೆ. ನಿರಂತರ ಪಂದ್ಯಗಳು ಮತ್ತು ಪ್ರಯಾಣದಿಂದ ಆಟಗಾರರು ದೈಹಿಕ ಆಯಾಸಕ್ಕೆ ಒಳಗಾಗುತ್ತಾರೆ. ಬಿಸಿಸಿಐ ಮತ್ತು ತಂಡದ ವೈದ್ಯಕೀಯ ತಂಡ ಜೈಸ್ವಾಲ್ ಅವರ ಚೇತರಿಕೆಯನ್ನು ನಿಕಟವಾಗಿ ಗಮನಿಸುತ್ತಿದೆ. ಅಭಿಮಾನಿಗಳು ಶೀಘ್ರ ಚೇತರಿಸಿಕೊಂಡು ಕಣಕ್ಕಿಳಿಯಲಿ ಎಂದು ಆಶಿಸುತ್ತಿದ್ದಾರೆ.

# ಮುಡಾ ಸೈಟ್ ಹಗರಣ: ಇಂದು ಲೋಕಾಯುಕ್ತ ಬಿ-ರಿಪೋರ್ಟ್ ಭವಿಷ್ಯ ನಿರ್ಧಾರ




**ಬೆಂಗಳೂರು**: ಕರ್ನಾಟಕ ರಾಜಕಾರಣದಲ್ಲಿ ತೀವ್ರ ಸಂಚಲನ ಮೂಡಿಸಿರುವ ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ಸೈಟ್ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಇಂದು ಅತ್ಯಂತ ನಿರ್ಣಾಯಕ ದಿನವಾಗಿದೆ. ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ 'ಬಿ-ರಿಪೋರ್ಟ್' (ಕ್ಲೀನ್‌ಚಿಟ್) ಕುರಿತು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಇಂದು ತನ್ನ ಮಹತ್ವದ ತೀರ್ಪನ್ನು ಪ್ರಕಟಿಸಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ ಮುಡಾದಿಂದ 14 ಸೈಟ್‌ಗಳನ್ನು ಮಂಜೂರು ಮಾಡಿದ ವಿಚಾರದಲ್ಲಿ ಅಕ್ರಮ ನಡೆದಿದೆ ಎಂಬ ಆರೋಪ ಕೇಳಿಬಂದಿತ್ತು.

ಈ ಪ್ರಕರಣದ ತನಿಖೆ ನಡೆಸಿದ್ದ ಲೋಕಾಯುಕ್ತ ಪೊಲೀಸರು, ಯಾವುದೇ ಅಕ್ರಮ ನಡೆದಿಲ್ಲ ಎಂದು ತಿಳಿಸಿ ನ್ಯಾಯಾಲಯಕ್ಕೆ 'ಬಿ-ರಿಪೋರ್ಟ್' ಸಲ್ಲಿಸಿದ್ದರು. ಅಂದರೆ, ಆರೋಪಿಗಳ ವಿರುದ್ಧ ಸಾಕ್ಷ್ಯಾಧಾರಗಳ ಕೊರತೆಯಿಂದ ಪ್ರಕರಣವನ್ನು ಕೈಬಿಡುವಂತೆ ವರದಿ ನೀಡಿದ್ದರು. ಲೋಕಾಯುಕ್ತ ನೀಡಿದ್ದ ಈ ಕ್ಲೀನ್‌ಚಿಟ್ ಅನ್ನು ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ತೀವ್ರವಾಗಿ ವಿರೋಧಿಸಿ ನ್ಯಾಯಾಲಯದ ಮೆಟ್ಟಿಲೇರಿದ್ದರು. ಲೋಕಾಯುಕ್ತ ತನಿಖೆಯು ಪಾರದರ್ಶಕವಾಗಿ ನಡೆದಿಲ್ಲ ಮತ್ತು ಸಿಎಂ ಸಿದ್ದರಾಮಯ್ಯ ಪ್ರಭಾವಕ್ಕೆ ಒಳಗಾಗಿದೆ ಸ್ನೇಹಮಯಿ ಕೃಷ್ಣ ವಾದಿಸಿದ್ದರು. ನ್ಯಾಯಾಲಯದಲ್ಲಿ ಖುದ್ದಾಗಿ ವಾದ ಮಂಡಿಸಿದ್ದ ಸ್ನೇಹಮಯಿ ಕೃಷ್ಣ, ಬಿ-ರಿಪೋರ್ಟ್ ಅನ್ನು ತಿರಸ್ಕರಿಸಿ ಮರು ತನಿಖೆಗೆ ಅಥವಾ ಸಿಬಿಐ ತನಿಖೆಗೆ ಆದೇಶಿಸುವಂತೆ ಮನವಿ ಮಾಡಿದ್ದರು. ಈ ವಾದಗಳನ್ನು ಆಲಿಸಿದ್ದ ನ್ಯಾಯಾಲಯವು ಇಂದು ತನ್ನ ಆದೇಶವನ್ನು ಕಾಯ್ದಿರಿಸಿದೆ. ನ್ಯಾಯಾಲಯದ ಮುಂದೆ ಇಂದು ಎರಡು ಪ್ರಮುಖ ಆಯ್ಕೆಗಳಿವೆ: ಬಿ-ರಿಪೋರ್ಟ್ ಅಂಗೀಕಾರ: ಒಂದು ವೇಳೆ ನ್ಯಾಯಾಲಯವು ಲೋಕಾಯುಕ್ತ ವರದಿಯನ್ನು ಒಪ್ಪಿಕೊಂಡರೆ, ಸಿದ್ದರಾಮಯ್ಯ ಮತ್ತು ಅವರ ಕುಟುಂಬಕ್ಕೆ ಈ ಪ್ರಕರಣದಿಂದ ದೊಡ್ಡ ಮಟ್ಟದ ನಿರಾಳತೆ ಸಿಗಲಿದೆ. ಇದರಿಂದ ಸಿಎಂ ಸಿದ್ದರಾಮಯ್ಯರಿಗೆ ಗೆಲುವು ಸಿಕ್ಕಂತಾಗುತ್ತದೆ.

ಬಿ-ರಿಪೋರ್ಟ್ ತಿರಸ್ಕಾರ: ನ್ಯಾಯಾಲಯವು ವರದಿಯನ್ನು ಒಪ್ಪದಿದ್ದರೆ, ಪ್ರಕರಣದ ಮರು ತನಿಖೆಗೆ ಆದೇಶಿಸಬಹುದು ಅಥವಾ ವಿಶೇಷ ತನಿಖಾ ದಳಕ್ಕೆ ಪ್ರಕರಣವನ್ನು ವರ್ಗಾಯಿಸಬಹುದು. ಇದು ಸಿದ್ದರಾಮಯ್ಯ ಅವರಿಗೆ ದೊಡ್ಡ ಕಾನೂನು ಸಂಕಷ್ಟವನ್ನು ತಂದೊಡ್ಡಲಿದೆ. ಇದಲ್ಲದೆ, ಜಾರಿ ನಿರ್ದೇಶನಾಲಯ (ED) ಕೂಡ ಈ ಪ್ರಕರಣದಲ್ಲಿ ತಕರಾರು ಅರ್ಜಿ ಸಲ್ಲಿಸಿರುವುದು ಪ್ರಕರಣದ ಗಂಭೀರತೆಯನ್ನು ಹೆಚ್ಚಿಸಿದೆ. ಇಂದಿನ ಅಂತಿಮ ವರದಿ ಸಲ್ಲಿಕೆಯಾದ ಬಳಿಕ ಇಡೀ ರಾಜ್ಯದ ರಾಜಕೀಯ ಭವಿಷ್ಯದ ಮೇಲೆ ಈ ತೀರ್ಪು ಪ್ರಭಾವ ಬೀರಲಿದೆ.

## ಕಾಂಗ್ರೆಸ್ ಪ್ರತಿಭಟನೆ ವೇಳೆ ಕಳ್ಳರ ಕೈಚಳಕ – ಎಎಸ್‌ಐ ಮಾಂಗಲ್ಯ ಸರ ಕಳವು




**ಶಿವಮೊಗ್ಗ**: ನಗರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಮ್ಮಿಕೊಂಡಿದ್ದ ಬಿಜೆಪಿ ಕಚೇರಿ ಮುತ್ತಿಗೆ ಪ್ರತಿಭಟನೆಯ ವೇಳೆ ಅಹಿತಕರ ಘಟನೆ ನಡೆದಿದೆ. ಪ್ರತಿಭಟನೆ ನಿಯಂತ್ರಣಕ್ಕೆ ಕರ್ತವ್ಯ ನಿರತರಾಗಿದ್ದ ಮಹಿಳಾ ಪೊಲೀಸ್ ಅಧಿಕಾರಿಯೊಬ್ಬರ ಕುತ್ತಿಗೆಯಲ್ಲಿದ್ದ ಸುಮಾರು 60 ಗ್ರಾಂ ತೂಕದ ಮಾಂಗಲ್ಯ ಸರವನ್ನು ಕಳ್ಳರು ಕಿತ್ತುಕೊಂಡು ಪರಾರಿಯಾಗಿದ್ದಾರೆ.

ಪ್ರತಿಭಟನಾಕಾರರನ್ನು ನಿಯಂತ್ರಿಸುವಲ್ಲಿ ಪೊಲೀಸರು ತೊಡಗಿಸಿ ಕೊಂಡಿದ್ದ ಸಂದರ್ಭದಲ್ಲೇ ಈ ಕಳ್ಳತನ ನಡೆದಿದ್ದು, ತಳ್ಳಾಟ-ನೂಕಾಟದ ಗದ್ದಲದ ನಡುವೆ ಕಳ್ಳರು ಅವಕಾಶ ಮಾಡಿಕೊಂಡು ಸರವನ್ನು ಎಗರಿಸಿದ್ದಾರೆ ಎಂದು ತಿಳಿದುಬಂದಿದೆ. ಈ ಘಟನೆಯಲ್ಲಿ ಬಾಧಿತರಾದವರು ಎಎಸ್‌ಐ ಅಮೃತಾಬಾಯಿ. ಅವರು ಇತ್ತೀಚೆಗಷ್ಟೇ ಹೊಸದಾಗಿ ಮಾಂಗಲ್ಯ ಸ ರವನ್ನು ಮಾಡಿಸಿಕೊಂಡಿದ್ದರು ಎನ್ನಲಾಗಿದೆ.

ಅಪೇಕ್ಷಿಸದ ಈ ಘಟನೆಗೆ ಮನಸ್ಸು ನೊಂದ ಎಎಸ್‌ಐ ಅಮೃತಾಬಾಯಿ ಮಾಂಗಲ್ಯ ಸರ ಕಳೆದುಕೊಂಡು ಕಣ್ಣೀರಿಟ್ಟಿದ್ದಾರೆ. ಘಟನೆ ನಡೆದ ಸಮಯದಲ್ಲಿ ಭದ್ರತಾ ವ್ಯವಸ್ಥೆಗಾಗಿ ಪೊಲೀಸರು ಪೂರ್ಣವಾಗಿ ನಿರತರಾಗಿದ್ದು, ಅದನ್ನೇ ದುರುಪಯೋಗ ಪಡಿಸಿಕೊಂಡ ಕಳ್ಳರು ಈ ಕೃತ್ಯವೆಸಗಿದ್ದಾರೆ ಎನ್ನಲಾಗಿದೆ.

ನರೇಗಾ ಯೋಜನೆಯ ಹೆಸರು ಬದಲಾವಣೆ ಹಾಗೂ ಇಡಿ ದುರ್ಬಳಕೆ ಆರೋಪಿಸಿ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ್ದರು. ಈ ಸಂದರ್ಭ ಎಎಸ್‌ಐ ಅಮೃತಾಬಾಯಿ ಬಂದೋಬಸ್ತ್ ಕರ್ತವ್ಯದಲ್ಲಿ ಇದ್ದರು. ಘಟನೆಯ ಬಳಿಕ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಕಳ್ಳರ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ.

## ಜಾಗತಿಕ ರಾಜಕೀಯದಲ್ಲಿ ಸಂಚಲನ: ಎಪ್ಸ್ಟೀನ್ ಫೈಲ್ಸ್ ಬಹಿರಂಗ, ಗಣ್ಯರಿಗೆ ಸಂಕಷ್ಟ



ದಿನಾಂಕವು ದೇಶ ಮಾತ್ರವಲ್ಲ, ವಿಶ್ವ ರಾಜಕೀಯ ವಲಯದಲ್ಲೇ ಭಾರೀ ಚರ್ಚೆಗೆ ಕಾರಣವಾಗಿದೆ. ಅಮೆರಿಕದಲ್ಲಿ ಜೆಫ್ರಿ ಎಪ್ಸ್ಟೀನ್‌ಗೆ ಸಂಬಂಧಿಸಿದ ರಹಸ್ಯ ದಾಖಲೆಗಳು ರಿಲೀಸ್ ಆಗಲಿರುವುದು ಇಡೀ ಜಗತ್ತಿನ ರಾಜಕೀಯ ವಲಯದಲ್ಲಿ ನಡುಕ ಹುಟ್ಟಿಸಿದೆ. ಆರ್ಥಿಕ ಹಾಗೂ ಲೈಂಗಿಕ ಅಪರಾಧಿ ಜೆಫ್ರಿ ಎಪ್ಸ್ಟೀನ್ ಸಂಗ್ರಹಿಸಿದ್ದ ರಹಸ್ಯ ದಾಖಲೆಗಳು ಬಹಿರಂಗವಾದರೆ, ವಿಶ್ವದ ಹಲವು ಶಕ್ತಿಶಾಲಿ ರಾಜಕಾರಣಿಗಳು, ಉದ್ಯಮಿಗಳು ಹಾಗೂ ಗಣ್ಯರ ಮುಖವಾಡ ಕಳಚುವ ಸಾಧ್ಯತೆ ಇದೆ ಎಂಬ ಆತಂಕ ವ್ಯಾಪಕವಾಗಿದೆ. ಎಪ್ಸ್ಟೀನ್ ಹಾಗೂ ಆತನ ಗೆಳತಿ ಗಿಸ್ಲೇನ್ ಮ್ಯಾಕ್ಸ್ವೆಲ್ ಬಳಿ ಇದ್ದ ದಾಖಲೆಗಳಲ್ಲಿ, ಅಮೆರಿಕ ಸೇರಿದಂತೆ ಹಲವು ದೇಶಗಳ ರಾಜಕೀಯ ನಾಯಕರ, ಪ್ರಭಾವಿ ವ್ಯಕ್ತಿಗಳ ಕುರಿತ ಸೂಕ್ಷ್ಮ ಮಾಹಿತಿಯಿತ್ತು ಎನ್ನಲಾಗುತ್ತಿದೆ. ಎಪ್ಸ್ಟೀನ್ ವಿಚಾರಣೆ ಹಾಗೂ ಮ್ಯಾಕ್ಸ್ವೆಲ್ ನ್ಯಾಯಾಂಗ ಪ್ರಕ್ರಿಯೆ ವೇಳೆ ಈ ಎಲ್ಲಾ ದಾಖಲೆಗಳನ್ನು ಎಫ್‌ಬಿಐ ಸಂಗ್ರಹಿಸಿಕೊಂಡಿದೆ.

ಈಗ ಅಮೆರಿಕದ ಪಾರದರ್ಶಕತೆ ಕಾಯ್ದೆ ಅಡಿಯಲ್ಲಿ ಈ ದಾಖಲೆಗಳ ಕೆಲ ಭಾಗ ಬಹಿರಂಗವಾಗುವ ಸಾಧ್ಯತೆ ಇದೆ ಎಂಬ ಸುದ್ದಿ ಭಾರೀ ಸಂಚಲನ ಮೂಡಿಸಿದೆ. ಈ ರಹಸ್ಯ ದಾಖಲೆಗಳು ಬಹಿರಂಗವಾದರೆ ಅಮೆರಿಕ ರಾಜಕೀಯಕ್ಕೂ ದೊಡ್ಡ ಆಘಾತ ತರಬಹುದು ಎಂದು ಅಂದಾಜಿಸಲಾಗಿದೆ.. ಅಮೆರಿಕದ ಮಾಜಿ ಅಧ್ಯಕ್ಷ ಬಿಲ್ ಕ್ಲಿಂಟನ್ ಹೆಸರು ಮತ್ತೆ ಚರ್ಚೆಗೆ ಬರುವ ಸಾಧ್ಯತೆ ಇದೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಜೊತೆಗೆ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತಕ್ಕೂ ಇದರಿಂದ ಸಂಕಷ್ಟ ಎದುರಾಗಬಹುದೇ ಎಂಬ ಪ್ರಶ್ನೆ ಎದ್ದಿದೆ. ಆದರೆ ಈ ಎಪ್ಸ್ಟೀನ್ ಫೈಲ್ಸ್‌ನ ಪರಿಣಾಮ ಅಮೆರಿಕಕ್ಕೆ ಮಾತ್ರ ಸೀಮಿತವಾಗಿಲ್ಲ, ಭಾರತ ರಾಜಕೀಯಕ್ಕೂ ಇದರ ಸಂಪರ್ಕ ಇರಬಹುದೇ? ಎಂಬ ಅನುಮಾನಗಳು ರಾಜಕೀಯ ವಲಯದಲ್ಲಿ ಆತಂಕ ಸೃಷ್ಟಿಸಿವೆ. ಮಾಜಿ ಸಂಸದ ಡಾ. ಸುಬ್ರಹ್ಮಣ್ಯ ಸ್ವಾಮಿ ಈ ಹಿಂದೆ ಎಪ್ಸ್ಟೀನ್ ಫೈಲ್ಸ್‌ಗೆ ಭಾರತದ ಲಿಂಕ್ ಇದೆ ಎಂದು ಹೇಳಿಕೆ ನೀಡಿ ಸಂಚಲನ ಮೂಡಿಸಿದ್ದರು. ಕೆಲವು ಕೇಂದ್ರ ಸಚಿವರು, ಮಾಜಿ ಸಚಿವರು ಹಾಗೂ ಸಂಸದರ ಹೆಸರುಗಳು ಈ ದಾಖಲೆಗಳಲ್ಲಿ ಇರಬಹುದು ಎಂಬ ಹೇಳಿಕೆ ನೀಡಿದ್ದರು. ಸುಬ್ರಹ್ಮಣ್ಯ ಸ್ವಾಮಿ ಅವರು, ಮೋದಿ ಸರ್ಕಾರದ ಮೇಲೆ ಅಮೆರಿಕ ಬ್ಲ್ಯಾಕ್‌ಮೇಲ್ ಮಾಡುವ ಸಾಧ್ಯತೆಯ ಬಗ್ಗೆ ಮಾತನಾಡಿದ್ದರು.


ಕೇಂದ್ರ ಸಚಿವ ಹರ್ದೀಪ್ ಪುರಿ ಹೆಸರನ್ನೂ ಪ್ರಸ್ತಾಪಿಸಿ, ಲೈಂಗಿಕ ಹಗರಣಗಳ ಸುಳಿಯಲ್ಲಿ ಗಣ್ಯರು ಸಿಲುಕುವ ಭೀತಿ ಇದೆ ಎಂದು ಎಚ್ಚರಿಕೆ ನೀಡಿದ್ದರು. ಈ ಹೇಳಿಕೆಗಳು ಈಗ ಮತ್ತೆ ಚರ್ಚೆಗೆ ಬಂದಿವೆ. ಇದರ ನಡುವೆಯೇ, ಡಿಸೆಂಬರ್ 19ಕ್ಕೆ ರಾಜಕೀಯ ಭೂಕಂಪ ಎಂಬ ಮಾತುಗಳಿಗೆ ದೇಶೀಯ ರಾಜಕಾರಣಿಗಳ ಹೇಳಿಕೆಗಳು ಆತಂಕ ಮೂಡಿಸಿವೆ. ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಪೃಥ್ವಿರಾಜ್ ಚೌಹಾಣ್, ಡಿಸೆಂಬರ್ 19ರಂದು ದೊಡ್ಡ ರಾಜಕೀಯ ಬದಲಾವಣೆಗಳು ಸಂಭವಿಸಬಹುದು ಎಂದು ಹೇಳುವ ಮೂಲಕ ಕುತೂಹಲ ಹುಟ್ಟಿಸಿದ್ದಾರೆ. ಶಿವಸೇನೆ ನಾಯಕ ಸಂಜಯ್ ರಾವತ್ ಕೂಡ, ಡಿಸೆಂಬರ್ 19ಕ್ಕೆ ಪ್ರಧಾನಿ ಬದಲಾಗಬಹುದು, ಮೋದಿ ಸರ್ಕಾರ ಪತನವಾಗುವ ಸಾಧ್ಯತೆ ಇದೆ ಎಂಬ ಭವಿಷ್ಯ ನುಡಿದಿದ್ದಾರೆ. ಚಳಿಗಾಲದ ಅಧಿವೇಶನ ಡಿಸೆಂಬರ್ 19ಕ್ಕೆ ಅಂತ್ಯವಾಗುತ್ತಿರುವ ಹಿನ್ನೆಲೆಯಲ್ಲಿ, ಬಿಜೆಪಿ ಹೈಕಮಾಂಡ್ ಕೆಲವು ನಾಯಕರಿಗೆ ದೆಹಲಿಯಲ್ಲೇ ಇರಲು ಸೂಚನೆ ನೀಡಿದೆ ಎಂಬ ಮಾತುಗಳೂ ಹರಿದಾಡುತ್ತಿವೆ.

ಆದರೆ ಈ ಎಲ್ಲವೂ ಕೇವಲ ವದಂತಿಗಳೇ? ಅಥವಾ ಯಾವುದೋ ಮಹಾ ರಾಜಕೀಯ ಸ್ಫೋಟಕ್ಕೆ ವೇದಿಕೆ ಸಿದ್ಧವಾಗುತ್ತಿದೆಯೇ? ಎಪ್ಸ್ಟೀನ್ ಫೈಲ್ಸ್ ಬಹಿರಂಗವಾದ ಬಳಿಕವೇ ಈ ಎಲ್ಲಾ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ಸಿಗಲಿದೆ. ಆದರೆ ಡಿಸೆಂಬರ್ 19 ನಿಜಕ್ಕೂ ರಾಜಕೀಯ ಕ್ರಾಂತಿಯ ದಿನವಾಗುತ್ತದೆಯೇ ಎಂಬುದನ್ನು ಕಾದು ನೋಡಬೇಕಾಗಿದೆ.

## ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಯುವತಿ ಮೇಲೆ ಭಾರತೀಯ ಮೂಲದ ಕ್ಯಾಬ್ ಚಾಲಕನಿಂದ ಅತ್ಯಾಚಾರ

ವಾಷಿಂಗ್ಟನ್: ಕ್ಯಾಲಿಫೋರ್ನಿಯಾದಲ್ಲಿ ಭಾರತೀಯ ಮೂಲದ ಕ್ಯಾಬ್ ಚಾಲಕನೊಬ್ಬ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಯುವತಿ ಮೇಲೆ ಅತ್ಯಾಚಾರ ಎಸಗಿರುವ ಘಟನೆ ನಡೆದಿದೆ. 21 ವರ್ಷದ ಯುವತಿ ಮೇಲೆ 35ರ ಸಿಮ್ರಂಜಿತ್ ಸಿಂಗ್ ಸೆಖೋನ್ ಅತ್ಯಾಚಾರ ಎಸಗಿದ್ದಾನೆ. ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಸುಮಾರಿ ಥೌಸಂಡ್ ಓಕ್ಸ್ ಬಾರ್‌ನಿಂದ ಯುವತಿ ಕ್ಯಾಮರಿಲ್ಲೊದಲ್ಲಿರುವ ಆಕೆಯ ಮನೆಗೆ ಕ್ಯಾಬ್‌ನಲ್ಲಿ ಹೊರಟಿದ್ದಳು. ಯುವತಿ ತುಂಬಾ ಕುಡಿದಿದ್ದಳು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಕ್ಯಾಬ್‌ನಲ್ಲಿ ಪ್ರಯಾಣಿಸುತ್ತಿದ್ದಾಗ ಯುವತಿ ನಿದ್ರೆಗೆ ಜಾರಿದ್ದಾಳೆ. ಪ್ರಯಾಣ ಪೂರ್ಣಗೊಂಡಿದ್ದರೂ ಚಾಲಕ ಕ್ಯಾಬ್ ನಿಲ್ಲಿಸಿಲ್ಲ. ಚಾಲನೆ ಮುಂದುವರಿಸಿದ್ದಾನೆ. ಈ ನಡುವೆ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾನೆ. ಆರೋಪಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ವಿಚಾರಣೆಗೆ ಹಾಜರುಪಡಿಸಲಾಯಿತು. ನಾನು ತಪ್ಪಿತಸ್ಥನಲ್ಲ ಎಂದು ಆರೋಪಿ ಹೇಳಿಕೆ ನೀಡಿದ್ದಾನೆ. ಜಾಮೀನಿಗೆ 4,51,40,275 ಕೋಟಿ ರೂ. ನಿಗದಿಪಡಿಸಲಾಗಿದೆ. ಮುಂದಿನ ವಿಚಾರಣೆಯನ್ನು ನಿಗದಿಪಡಿಸಲಾಗಿದೆ.

## ವಿಪಕ್ಷಗಳ ಪ್ರತಿಭಟನೆ ನಡುವೆಯೇ ಲೋಕಸಭೆಯಲ್ಲಿ ಮಸೂದೆ ಅಂಗೀಕಾರ



**ನವದೆಹಲಿ**: ಭಾರೀ ಗದ್ದಲದ ನಡುವೆ ಲೋಕಸಭೆಯಲ್ಲಿ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಮಸೂದೆ, 2025 ಅನ್ನು ಅಂಗೀಕರಿಸಲಾಯಿತು. ಇದರಿಂದ ಕೋಪಗೊಂಡ ವಿಪಕ್ಷ ಸಂಸದರು, ಕೇಂದ್ರ ಸರ್ಕಾರ ರಾಷ್ಟ್ರಪಿತನನ್ನ ಅವಮಾನಿಸಿದೆ ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯ ನಿಬಂಧನೆಗಳನ್ನು ದುರ್ಬಲಗೊಳಿಸಿದೆ ಎಂದು ಆಕ್ರೋಶ ಹೊರಹಾಕಿ ಪ್ರತಿಭಟನೆ ನಡೆಸಿದವು. ಈ ಆರೋಪಗಳ ನಡುವೆ ಸರ್ಕಾರ ಹೊಸ ಮಸೂದೆಯನ್ನ ಸಮರ್ಥಿಸಿಕೊಂಡಿತು. ಸದನದಲ್ಲಿ ಮಾತನಾಡಿದ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ 2009ರ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಮಹಾತ್ಮ ಗಾಂಧಿಯವರ ಹೆಸರನ್ನು ನರೇಗಾಗೆ ಸೇರಿಸಲಾಗಿದೆ ಎಂದು ತಿರುಗೇಟು ನೀಡಿದರು.

ಆರಂಭದಲ್ಲಿ ಅದು ನರೇಗಾ ಆಗಿತ್ತು, ಮಹಾತ್ಮ ಗಾಂಧಿಯವರ ಹೆಸರನ್ನ ಮಸೂದೆಯಲ್ಲಿ ಸೇರಿಸಿರಲಿಲ್ಲ. 2009ರ ಚುನಾವಣೆ ಹತ್ತಿರ ಬಂದಾಗ ಮತಗಳನ್ನ ಪಡೆಯಲು ಕಾಂಗ್ರೆಸ್ ಬಾಪು ಅವರನ್ನ ನೆನಪಿಸಿಕೊಂಡಿತು. ಪ್ರಧಾನಿ ನರೇಂದ್ರ ಮೋದಿ ಅವರು ಎಂಜಿಎನ್‌ಇಜಿಎ ಅನ್ನು ಸರಿಯಾಗಿ ಮತ್ತು ಬಲವಾಗಿ ಜಾರಿಗೆ ತಂದರು ಎಂದು ನಾನು ಹೇಳಲು ಬಯಸುತ್ತೇನೆ ಎಂದು ಪ್ರತಿಪಾದಿಸಿದರು. ಕಾಂಗ್ರೆಸ್ ಬಾಪು ಅವರ ಆದರ್ಶಗಳನ್ನ ಹತ್ಯೆ ಮಾಡಿತು. ಆದ್ರೆ ಎನ್‌ಡಿಎ ಪ್ರಧಾನ ಮಂತ್ರಿ ಆವಾಸ್ ಯೋಜನೆ, ಉಜ್ವಲ ಯೋಜನೆ, ಸ್ವಚ್ಛ ಭಾರತ ಮಿಷನ್, ಆಯುಷ್ಮಾನ್ ಭಾರತ್ ಅಡಿಯಲ್ಲಿ ಪಕ್ಕಾ ಮನೆಗಳನ್ನ ನಿರ್ಮಿಸಿ ಬಾಪು ಅವರ ಆದರ್ಶ ಗಳನ್ನ ಪುನರುಜ್ಜೀವನಗೊಳಿಸಿತು ಎಂದು ಹೇಳುತ್ತಾ, ದಿ ಸರ್ಕಾರವು ಜವಾಹರಲಾಲ್ ನೆಹರು ಮತ್ತು ಮಹಾತ್ಮಾ ಗಾಂಧಿಯವರ ಹೆಸರಿನ ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನ ಪಟ್ಟಿ ಮಾಡಿ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿಯವರ ಟೀಕೆಗೆ ತಿರುಗೇಟು ನೀಡಿದರು ಸದನದ ಬಾವಿಗಿಳಿದು ಪ್ರತಿಭಟನೆ ಮಹಾತ್ಮ ಗಾಂಧಿಯವರ ಹೆಸರನ್ನು ತೆಗೆದುಹಾಕಿದ್ದಕ್ಕೆಸಂಬಂಧಿಸಿದಂತೆ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ, ಪ್ರತಿಪಕ್ಷದ ಶಾಸಕರು ಸದನದ ಬಾವಿಗಿಳಿದು, ಮಸೂದೆಯ ಪ್ರತಿಗಳನ್ನ ಹರಿದು ಸ್ಪೀಕರ್ ಕುರ್ಚಿಯ ಕಡೆಗೆ ಎಸೆದರು.

2026ರ ಅಂತ್ಯಕ್ಕೆ ದೇಶಾದ್ಯಂತ ಉಪಗ್ರಹ ಆಧಾರಿತ ಟೋಲ್: ಗಡ್ಕರಿ ಘೋಷಣೆ ಗಾಂಧಿಗೆ ಮಾಡಿದ ಅಪಮಾನ; ಖರ್ಗೆ ಟೀಕೆ ಇದಕ್ಕೂ ಮುನ್ನ, ಮಸೂ ದೆಯನ್ನು ಹಿಂಪಡೆಯುವಂತೆ ಒತ್ತಾಯಿಸಿ ವಿರೋಧ ಪಕ್ಷದ ಸಂಸದರು ಸಂಸತ್ತಿನ ಸಂಕೀರ್ಣದೊಳಗೆ ಪ್ರತಿಭಟನಾ ಮೆರವಣಿಗೆ ನಡೆಸಿದ್ದರು. ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರು ಈ ಶಾಸನ ಗಾಂಧಿಯವರಿಗೆ ಮಾಡಿದ ಅವಮಾನ ಮತ್ತು ಗ್ರಾಮೀಣ ಭಾರತದಲ್ಲಿ ಸಾಮಾಜಿಕ -ಆರ್ಥಿಕ ಪರಿವರ್ತನೆಗೆ ಕಾರಣವಾದ ಕೆಲಸ ಮಾಡುವ ಹಕ್ಕಿಗೆ ಒಂದು ಹೊಡೆತ ಎಂದು ಕರೆದರು. ಹಿರಿಯ ನಾಯಕಿ ಸೋನಿಯಾ ಗಾಂಧಿ ಅವರು ಮಕರ ದ್ವಾರದಲ್ಲಿ ನಡೆದ ಪ್ರದರ್ಶ ನಗಳಲ್ಲಿ ಸಂಸ ದರೊಂದಿಗೆ ಭಾಗಿಯಾಗಿದ್ದರು

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.